


ತುಂಗ ಬಿಂಬ
ಸತ್ಯ ಮತ್ತು ಧೈರ್ಯದ ಧ್ವನಿ
TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923




ಸಂಪುಟ: Vol: 04 | ಸಂಚಿಕೆ: Issue: 111 | ರಾಯಚೂರು Raichur 13-10-2026 | ಮಂಗಳವಾರ Tuesday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

# ಶೇ.56ರ ಮೀಸಲಾತಿ ಹೆಚ್ಚಳ ರದ್ದು

## ಪರಿಶಿಷ್ಟ ಜಾತಿ, ಪಂಗಡಗಳ ಮೀಸಲಾತಿ ಹೆಚ್ಚಳ ಅಸಂವಿಧಾನಿಕ

ಬೆಂಗಳೂರು, ಅ.12: ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಹೆಚ್ಚಿಸಿ ಒಟ್ಟು ಮೀಸಲಾತಿ ಪ್ರಮಾಣವನ್ನು ಶೇ.50ರಿಂದ ಶೇ.56ಕ್ಕೆ ಏರಿಸಿದ್ದ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೆ ಬಂದ ಕಾಯ್ದೆಯ ಪ್ರಮುಖ ನಿಬಂಧನೆಗಳನ್ನು ಕರ್ನಾಟಕ ಹೈಕೋರ್ಟ್ ಅಸಂವಿಧಾನಿಕವೆಂದು ಘೋಷಿಸಿ ರದ್ದುಗೊಳಿಸಿದೆ.

ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರನ್ನೊಳಗೊಂಡ ವಿಭಾಗೀಯ ಪೀಠ ಸೋಮವಾರ ಈ ಮಹತ್ವದ ತೀರ್ಪು ಪ್ರಕಟಿಸಿದೆ. ಮೀಸಲಾತಿ ಹೆಚ್ಚಳಕ್ಕೆ ಕೇವಲ ಮಧ್ಯಂತರ ತಡೆ ನೀಡದೆ, ಸಂವಿಧಾನಕ್ಕೆ ವಿರುದ್ಧವಾಗಿರುವ ಕಾಯ್ದೆಯ ನಿಬಂಧನೆಗಳನ್ನೇ ರದ್ದುಗೊಳಿಸಿರುವುದು ತೀರ್ಪಿನ ಪ್ರಮುಖ ಅಂಶವಾಗಿದೆ.

ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರವು ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಆಯೋಗದ ಶಿಫಾರಸು ಆಧರಿಸಿ 2022ರಲ್ಲಿ ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸುವ ನಿರ್ಧಾರ ಕೈಗೊಂಡಿತ್ತು.

ಈ ಸಂಬಂಧ 2022ರ ಅಕ್ಟೋಬರ್‌ನಲ್ಲಿ ಸುಗ್ರೀವಾಜ್ಞೆ ಹೊರಡಿಸಲಾಗಿತ್ತು. ನಂತರ ರೂಪಿಸಲಾದ ಕಾಯ್ದೆಗೆ 2023ರ ಜನವರಿ 11ರಂದು ರಾಜ್ಯಪಾಲರ ಒಪ್ಪಿಗೆ




ದೊರೆತಿದ್ದು, ಜನವರಿ 12ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿತ್ತು. ಕಾಯ್ದೆಯನ್ನು 2022ರ ನವೆಂಬರ್ 1ರಿಂದ ಜಾರಿಗೆ ಬಂದಂತೆ ಪರಿಗಣಿಸಲಾಗಿತ್ತು. ಹಿಂದುಳಿದ ವರ್ಗಗಳ ಶೇ.32ರ ಮೀಸಲಾತಿ ಸೇರಿ ರಾಜ್ಯದ ಒಟ್ಟು ಮೀಸಲಾತಿ ಶೇ.56ಕ್ಕೆ ಏರಿಕೆಯಾಗಿತ್ತು.

ಈ ಹೆಚ್ಚಳವನ್ನು ಪ್ರಶ್ನಿಸಿ ರಾಯಚೂರು ಮೂಲದ ಡಾ. ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಮತ್ತೊಂದು ಅರ್ಜಿಯನ್ನು ಸಾಗರ್ ಎಚ್.ಆರ್., ಪ್ರಜ್ವಲ್ ಕುಮಾರ್ ಡಿ. ಹಾಗೂ ಪುರುಷೋತ್ತಮ ಗೌಡ ಜಿ.ಎಂ. ಸಲ್ಲಿಸಿದ್ದರು. ಎರಡೂ ಅರ್ಜಿಗಳನ್ನು ಒಟ್ಟಿಗೆ ವಿಚಾರಣೆ ನಡೆಸಿದ ನ್ಯಾಯಪೀಠ ಅಂತಿಮ ತೀರ್ಪು ನೀಡಿದೆ.

ವಿಶೇಷವೆಂದರೆ, ಮೀಸಲಾತಿ ಹೆಚ್ಚಳದ ಕಾಯ್ದೆಯನ್ನು ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೆ ತರಲಾಗಿದ್ದರೂ, ನಂತರ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರವೂ ಅದನ್ನು ನ್ಯಾಯಾಲಯದಲ್ಲಿ ಸಮರ್ಥಿಸಿಕೊಂಡಿತ್ತು. ರಾಜ್ಯ ಸರ್ಕಾರದ ಪರವಾಗಿ ಹಿರಿಯ ವಕೀಲ ಪ್ರೊ. ರವಿವರ್ಮ ಕುಮಾರ್ ವಾದ ಮಂಡಿಸಿ, ವಿವಿಧ ಆಯೋಗಗಳು ಮತ್ತು ಸಮಿತಿಗಳ ವರದಿಗಳು ಮೀಸಲಾತಿ ಹೆಚ್ಚಳಕ್ಕೆ ಆಧಾರವಾಗಿವೆ ಎಂದು ಪ್ರತಿಪಾದಿಸಿದ್ದರು. ಮತ್ತೊಂದು ಸಂಬಂಧಿತ ಅರ್ಜಿಯಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಪರ ಹಿರಿಯ ವಕೀಲ ರೂಬೆನ್ ಜೇಕಬ್ ಹಾಜರಾಗಿದ್ದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆ, ಸಾಮಾಜಿಕ ಹಿಂದುಳಿದಿರುವಿಕೆ ಹಾಗೂ ಸರ್ಕಾರಿ ಸೇವೆಗಳಲ್ಲಿ ಸಮರ್ಪಕ ಪ್ರಾತಿನಿಧ್ಯದ ಕೊರತೆಯನ್ನು ಪರಿಗಣಿಸಿ ಮೀಸಲಾತಿ ಹೆಚ್ಚಿಸಲಾಗಿದೆ ಎಂಬುದು ಸರ್ಕಾರದ ವಾದವಾಗಿತ್ತು. ಆದರೆ ಸುಪ್ರೀಂಕೋರ್ಟ್ ನಿಗದಿಪಡಿಸಿರುವ ಶೇ.50ರ ಮಿತಿಯನ್ನು ಮೀರಲು ಅಗತ್ಯವಾದ ಅಸಾಧಾರಣ ಪರಿಸ್ಥಿತಿಯನ್ನು ಸರ್ಕಾರ ಸಾಬೀತುಪಡಿಸಿಲ್ಲ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಸಮುದಾಯಗಳ ಜನಸಂಖ್ಯೆ ಹೆಚ್ಚಿರುವುದೊಂದೇ ಶೇ.50ರ ಮಿತಿಯನ್ನು ಮೀರುವುದಕ್ಕೆ ಸಾಕಷ್ಟು ಕಾರಣವಾಗುವುದಿಲ್ಲ. ಸಾಮಾಜಿಕ ನ್ಯಾಯದ ಉದ್ದೇಶವೂ ಸಂವಿಧಾನದ ಸಮಾನತೆಯ ತತ್ವಗಳಿಗೆ ಅನುಗುಣವಾಗಿರಬೇಕು ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಅಲ್ಲದೆ, ಇಂತಹ ಮಹತ್ವದ ನೀತಿ ನಿರ್ಧಾರ ಕೈಗೊಳ್ಳುವ ಮೊದಲು ರಾಷ್ಟ್ರೀಯ ಪರಿಶಿಷ್ಟ ಜಾತಿ ಆಯೋಗ ಹಾಗೂ ರಾಷ್ಟ್ರೀಯ ಪರಿಶಿಷ್ಟ ಪಂಗಡಗಳ ಆಯೋಗದೊಂದಿಗೆ ಸಮಾಲೋಚನೆ ನಡೆಸುವುದು ಅಗತ್ಯವಾಗಿತ್ತು. ಕಾಯ್ದೆ ಜಾರಿಯಾದ ನಂತರ ನಡೆಸಿದ ಪತ್ರ ವ್ಯವಹಾರವನ್ನು ಪೂರ್ವ ಸಮಾಲೋಚನೆ ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ತಿಳಿಸಿದೆ.

ಸಂವಿಧಾನದ 14 ಮತ್ತು 15ನೇ ವಿಧಿಗಳಿಗೆ ವಿರುದ್ಧವಾಗಿ ಒಟ್ಟು ಮೀಸಲಾತಿಯನ್ನು ಶೇ.50ರ ಮಿತಿಗಿಂತ ಹೆಚ್ಚಿಸುವ ಮಟ್ಟಿಗೆ ಕಾಯ್ದೆಯ ಸೆಕ್ಷನ್ 3 ಅನ್ನು ರದ್ದುಗೊಳಿಸಲಾಗಿದೆ. ಸರ್ಕಾರಿ ಉದ್ಯೋಗಗಳ ಮೀಸಲಾತಿಗೆ ಸಂಬಂಧಿಸಿದ ಸೆಕ್ಷನ್ 4 ಅನ್ನು ಸಂವಿಧಾನದ 14 ಮತ್ತು 16ನೇ ವಿಧಿಗಳ ಉಲ್ಲಂಘನೆ ಎಂದು ಘೋಷಿಸಿ ಸಂಪೂರ್ಣ ರದ್ದುಗೊಳಿಸಲಾಗಿದೆ.

ಆದರೆ ಈ ತೀರ್ಪಿನಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೂಲ ಮೀಸಲಾತಿ ರದ್ದಾಗಿಲ್ಲ. ಶೇ.50ರ ಮಿತಿಯನ್ನು ಮೀರುವ ಹೆಚ್ಚಳಕ್ಕೆ ಸಂಬಂಧಿಸಿದ ಕಾನೂನು ನಿಬಂಧನೆಗಳನ್ನು ಮಾತ್ರ ನ್ಯಾಯಾಲಯ ಅಸಂವಿಧಾನಿಕವೆಂದು ಘೋಷಿಸಿದೆ.

ಸೆಪ್ಟೆಂಬರ್ 9ರಂದು ವಿಚಾರಣೆ ಪೂರ್ಣಗೊಳಿಸಿ ತೀರ್ಪು ಕಾಯ್ದಿರಿಸಿದ್ದ ವಿಭಾಗೀಯ ಪೀಠವು ಅಕ್ಟೋಬರ್ 12ರಂದು 170 ಪುಟಗಳ ತೀರ್ಪು ಪ್ರಕಟಿಸಿ, ಎರಡೂ ಅರ್ಜಿಗಳನ್ನು ಅಂಗೀಕರಿಸಿದೆ. ಈ ತೀರ್ಪು ರಾಜ್ಯದ ಶಿಕ್ಷಣ ಸಂಸ್ಥೆಗಳ ಪ್ರವೇಶಾತಿ ಹಾಗೂ ಸರ್ಕಾರಿ ನೇಮಕಾತಿಗಳ ಮೀಸಲಾತಿ ವ್ಯವಸ್ಥೆಯ ದೃಷ್ಟಿಯಿಂದ ಮಹತ್ವ ಪಡೆದಿದೆ.

## ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ನೇಮಕ

ಬೆಂಗಳೂರು, ಅ.12: ಕರ್ನಾಟಕದ ನೂತನ ರಾಜ್ಯಪಾಲರಾಗಿ ಬಿಜೆಪಿಯ ಹಿರಿಯ ನಾಯಕಿ ಹಾಗೂ ಮಾಜಿ ಸಂಸದೆ ಡಾ. ಸುಧಾ ಯಾದವ್ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಕ ಮಾಡಿದ್ದಾರೆ. ಕರ್ನಾಟಕ ಸೇರಿದಂತೆ ದೇಶದ ಆರು ರಾಜ್ಯಗಳ ರಾಜ್ಯಪಾಲರ ನೇಮಕಾತಿ ಹಾಗೂ ವರ್ಗಾವಣೆ ಕುರಿತು ಸೋಮವಾರ ರಾಷ್ಟ್ರಪತಿ ಭವನ ಅಧಿಕೃತ ಪ್ರಕಟಣೆ ಹೊರಡಿಸಿದೆ.

ಪ್ರಸ್ತುತ ಕರ್ನಾಟಕದ ರಾಜ್ಯಪಾಲರಾಗಿರುವ ಥಾವರ್‌ಚಂದ್ ಗೆಹ್ಲೋಟ್ ಅವರ ಸ್ಥಾನಕ್ಕೆ ಡಾ. ಸುಧಾ ಯಾದವ್ ನೇಮಕಗೊಂಡಿದ್ದಾರೆ. ಹೊಸ ರಾಜ್ಯಪಾಲರು ಅಧಿಕಾರ ಸ್ವೀಕರಿಸಿದ ದಿನಾಂಕದಿಂದ ನೇಮಕಾತಿ ಜಾರಿಗೆ ಬರಲಿದೆ ಎಂದು ರಾಷ್ಟ್ರಪತಿ ಭವನ ತಿಳಿಸಿದೆ.

ಈ ನೇಮಕಾತಿಯೊಂದಿಗೆ ಕೇರಳ, ತಮಿಳುನಾಡು, ಒಡಿಶಾ, ಉತ್ತರಾಖಂಡ ಹಾಗೂ ಸಿಕ್ಕಿಂ ರಾಜ್ಯಗಳ ರಾಜ್ಯಪಾಲರ



ಹುದ್ದೆಗಳಲ್ಲಿಯೂ ಬದಲಾವಣೆ ಮಾಡಲಾಗಿದೆ.

ಪ್ರಸ್ತುತ ಸಿಕ್ಕಿಂ ರಾಜ್ಯಪಾಲರಾಗಿರುವ ಓಂ ಪ್ರಕಾಶ್ ಮಾಥುರ್ ಅವರನ್ನು ಕೇರಳದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಕೇರಳದ ರಾಜ್ಯಪಾಲರಾಗಿರುವ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ತಮಿಳುನಾಡಿನ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ.

ಅದೇ ರೀತಿ, ಬ್ರಜ್ ಮೋಹನ್ ರಾಮ್ ಅವರನ್ನು ಒಡಿಶಾದ ರಾಜ್ಯಪಾಲರನ್ನಾಗಿ, ಡಾ. ಧಾಲ್ ಸಿಂಗ್ ಬಿಸೆನ್ ಅವರನ್ನು ಉತ್ತರಾಖಂಡದ ರಾಜ್ಯಪಾಲರನ್ನಾಗಿ ಹಾಗೂ ದುಷ್ಯಂತ್ ಗೌತಮ್ ಅವರನ್ನು ಸಿಕ್ಕಿಂನ ನೂತನ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ.

ಆರು ರಾಜ್ಯಗಳಿಗೆ ಸಂಬಂಧಿಸಿದ ಈ ಬದಲಾವಣೆಯಲ್ಲಿ ನಾಲ್ವರಿಗೆ ಹೊಸದಾಗಿ ರಾಜ್ಯಪಾಲರ ಜವಾಬ್ದಾರಿ ನೀಡಲಾಗಿದ್ದು, ಈಗಾಗಲೇ ರಾಜ್ಯಪಾಲರಾಗಿರುವ ಇಬ್ಬರನ್ನು ಬೇರೆ ರಾಜ್ಯಗಳಿಗೆ ವರ್ಗಾಯಿಸಲಾಗಿದೆ.

ಕರ್ನಾಟಕದ ನೂತನ ರಾಜ್ಯಪಾಲರಾಗಿ ನೇಮಕಗೊಂಡಿರುವ ಡಾ. ಸುಧಾ ಯಾದವ್ ಅವರು ಹರಿಯಾಣದ ಹಿರಿಯ ಬಿಜೆಪಿ ನಾಯಕಿಯಾಗಿದ್ದಾರೆ. 1999ರ ಲೋಕಸಭಾ ಚುನಾವಣೆಯಲ್ಲಿ 2ನೇ ಪುಟಕ್ಕೆ

## ಕಾಂಗ್ರೆಸ್ ಸಂಸದನ ವಜಾಕ್ಕೆ ಆಗ್ರಹಿಸಿ ಬಿಜೆಪಿ ಮಹಿಳೆಯರ ಪ್ರತಿಭಟನೆ

ರಾಯಚೂರು, ಅ.12: ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ ಮಣಿಪುರದ ಕಾಂಗ್ರೆಸ್ ಲೋಕಸಭಾ ಸಂಸದ ಡಾ. ಅಂಗೋಮ್ಚಾ ಬಿಮೋಲ್ ಅಕೋಯಿಜಮ್ ಅವರನ್ನು ಬಂಧಿಸಿ, ಸಂಸದ ಸ್ಥಾನದಿಂದ ವಜಾಗೊಳಿಸಬೇಕು ಹಾಗೂ ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಸೋಮವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಮಹಿಳಾ ಮೋರ್ಚಾ ಕಾರ್ಯಕರ್ತೆಯರ ನೇತೃತ್ವದಲ್ಲಿ ಜಮಾಯಿಸಿದ ಬಿಜೆಪಿ ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತರು ಕಾಂಗ್ರೆಸ್ ಪಕ್ಷದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಸಂಸದ ಬಿಮೋಲ್ ಅಕೋಯಿಜಮ್ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಭಾವಚಿತ್ರಗಳಿಗೆ ಚಪ್ಪಲಿಯಿಂದ ಹೊಡೆಯುವ ಮೂಲಕ ಪ್ರತಿಭಟನಾಕಾರರು ತಮ್ಮ ಆಕ್ರೋಶ ಹೊರಹಾಕಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಅನಿತಾ ನವಲಕಲ್ ಮಾತನಾಡಿ, ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಗಂಭೀರ ಆರೋಪಗಳು ಸಂಸದನ ವಿರುದ್ಧ



ಕೇಳಿಬಂದಿವೆ. ಆರೋಪಗಳ ಹಿನ್ನೆಲೆಯಲ್ಲಿ ಅವರನ್ನು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಹುದ್ದೆಯಿಂದ ವಜಾಗೊಳಿಸಲಾಗಿದೆ. ಇಂತಹ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವು ಆರೋಪಿತ ಸಂಸದನ ವಿರುದ್ಧ ಕ್ರಮ ಕೈಗೊಂಡು ತನಿಖೆಗೆ ಸಹಕರಿಸಬೇಕು ಎಂದು ಒತ್ತಾಯಿಸಿದರು.

ಮಹಿಳೆಯರ ಸುರಕ್ಷತೆ, ಗೌರವ ಮತ್ತು ಹಕ್ಕುಗಳ ಕುರಿತು ಮಾತನಾಡುವ ಕಾಂಗ್ರೆಸ್ ನಾಯಕರು ಈ ಪ್ರಕರಣದಲ್ಲಿ ತಮ್ಮ ನಿಲುವನ್ನು ಸ್ಪಷ್ಟಪಡಿಸಬೇಕು. ಆರೋಪ ಎದುರಿಸುತ್ತಿರುವ ಸಂಸದರನ್ನು ಪಕ್ಷದಿಂದ ಅಮಾನತುಗೊಳಿಸಬೇಕು. ಅವರು ನೈತಿಕ ಹೊಣೆ ಹೊತ್ತು ಲೋಕಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಕಿರುಕುಳದ ಆರೋಪಗಳನ್ನು ರಾಜಕೀಯ ದೃಷ್ಟಿಯಿಂದ ನೋಡದೆ ಸಂತ್ರಸ್ತರಿಗೆ ನ್ಯಾಯ ಒದಗಿಸಬೇಕು. ಪ್ರಕರಣದ ತನಿಖೆಯನ್ನು ಪಾರದರ್ಶಕವಾಗಿ ನಡೆಸಿ, ಆರೋಪಗಳು ಸಾಬೀತಾದಲ್ಲಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಮಹಿಳಾ ಮುಖಂಡರಾದ ವಿಜಯರಾಜೇಶ್ವರಿ ಗೋಪಿ ಶೆಟ್ಟಿ, ಸಹನಾ ಹಿರೇಮಠ, ಸುಮಲತಾ, ಸುಮಾ ಗಸ್ತಿ, ಸೀತಾ ನಾಯಕ್, ನಾಗರತ್ನ, ಪುಷ್ಪ, ಅಶ್ವಿನಿ, ಆದಿಲಕ್ಷ್ಮಿ ಹಾಗೂ ಮುಖಂಡರಾದ ರವೀಂದ್ರ ಜಲ್ದಾರ್, ನಾಗರಾಜ್ ಬಲ್ಕಿ, ಶಶಿರಾಜ್ ಕೃಷ್ಣಮೂರ್ತಿ, ನರಸಿಂಹ, ಮೌನೇಶ್, ನಾರಾಯಣರಾವ್ ಕುಲಕರ್ಣಿ, ನಾಗರಾಜ್ ಪಲಗಲು ಸೇರಿದಂತೆ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ಮತದಾನದ ಹಕ್ಕು ಹಾಗೂ ಪ್ರಜಾಪ್ರಭುತ್ವದ ರಕ್ಷಣೆಗೆ ಹೋರಾಟ ಅಗತ್ಯ: ಶಾಸಕ ಬಸನಗೌಡ ದದ್ದಲ್

ನವದೆಹಲಿ: ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯ ಘನತೆ ಕಾಪಾಡುವುದು, ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯುವುದು ಹಾಗೂ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕನ್ನು ಸಂರಕ್ಷಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಹೇಳಿದರು.

ನವದೆಹಲಿಯಲ್ಲಿ (ಇಂಡಿಯಾ) ಮೈತ್ರಿಕೂಟದ ವತಿಯಿಂದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಹಮ್ಮಿಕೊಂಡಿದ್ದ ದೆಹಲಿ ಚಲೋ ಪ್ರತಿಭಟನಾ ಅಭಿಯಾನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರಜಾಪ್ರಭುತ್ವವೆಂದರೆ ಕೇವಲ ಆಡಳಿತ ನಡೆಸುವ ವ್ಯವಸ್ಥೆಯಲ್ಲ. ಅದು ದೇಶದ ಪ್ರತಿಯೊಬ್ಬ ನಾಗರಿಕನ ಧ್ವನಿ, ಹಕ್ಕು, ಸ್ವಾತಂತ್ರ್ಯ ಹಾಗೂ ಸ್ವಾಭಿಮಾನದ ಪ್ರತೀಕವಾಗಿದೆ. ಸಂವಿಧಾನವು ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಹಕ್ಕನ್ನು ನೀಡಿದ್ದು, ಆ ಹಕ್ಕಿನ ರಕ್ಷಣೆಗಾಗಿ ನಿರಂತರವಾಗಿ ಜಾಗೃತರಾಗಿರುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ದೇಶದ ಚುನಾವಣಾ ವ್ಯವಸ್ಥೆಯು ಪಾರದರ್ಶಕ, ನಿಷ್ಪಕ್ಷಪಾತ ಹಾಗೂ ವಿಶ್ವಾಸಾರ್ಹವಾಗಿರಬೇಕು. ಚುನಾವಣಾ ಪ್ರಕ್ರಿಯೆಯ ಬಗ್ಗೆ ಸಾರ್ವಜನಿಕರಲ್ಲಿ ಅನುಮಾನಗಳು ಮೂಡದಂತೆ ನೋಡಿಕೊಳ್ಳುವುದು ಚುನಾವಣಾ ಆಯೋಗದ ಪ್ರಮುಖ ಕರ್ತವ್ಯವಾಗಿದೆ. ಪ್ರಜಾಪ್ರಭುತ್ವದ



ಮೂಲಾಧಾರವಾಗಿರುವ ಚುನಾವಣಾ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸಕ್ಕೆ ಧಕ್ಕೆಯಾಗಬಾರದು ಎಂದು ಅಭಿಪ್ರಾಯಪಟ್ಟರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಕಾರ್ಯವೈಖರಿ ಕುರಿತು (ಇಂಡಿಯಾ) ಮೈತ್ರಿಕೂಟದ ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದು, ಚುನಾವಣಾ ವ್ಯವಸ್ಥೆಯ ವಿಶ್ವಾಸಾರ್ಹತೆ ಕಾಪಾಡುವ ದೃಷ್ಟಿಯಿಂದ ಅವರು ತಮ್ಮ ಸ್ಥಾನಕ್ಕೆ ತಕ್ಷಣ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಮತದಾನದ ಹಕ್ಕು ಪ್ರತಿಯೊಬ್ಬ ನಾಗರಿಕನ ಪ್ರಜಾಸತ್ತಾತ್ಮಕ ಶಕ್ತಿಯಾಗಿದೆ. ಯಾವುದೇ ಕಾರಣಕ್ಕೂ ಈ ಹಕ್ಕಿಗೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು. ಸಂವಿಧಾನದ ಮೌಲ್ಯಗಳು ಮತ್ತು ಪ್ರಜಾಪ್ರಭುತ್ವದ ತತ್ವಗಳನ್ನು ಉಳಿಸುವ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕಾಗಿದೆ ಎಂದು ಹೇಳಿದರು.

ಪ್ರಜಾಪ್ರಭುತ್ವದ ರಕ್ಷಣೆಗಾಗಿ ನಡೆಯುವ ಹೋರಾಟವು ಯಾವುದೇ ಒಬ್ಬ ವ್ಯಕ್ತಿ ಅಥವಾ ಪಕ್ಷಕ್ಕೆ ಸೀಮಿತವಾಗಿಲ್ಲ. ದೇಶದ ಪ್ರತಿಯೊಬ್ಬ ನಾಗರಿಕನ ಹಕ್ಕು ಮತ್ತು ಭವಿಷ್ಯಕ್ಕೆ ಸಂಬಂಧಿಸಿದ ವಿಷಯವಾಗಿದೆ. ಹೀಗಾಗಿ ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹಾಗೂ ನಿಷ್ಪಕ್ಷಪಾತತೆ ಕಾಪಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕಾಂಗ್ರೆಸ್ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಸೇರಿದಂತೆ ಕರ್ನಾಟಕದ ಸಚಿವರು, ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಮೈತ್ರಿಕೂಟದ ವಿವಿಧ ಪಕ್ಷಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಪಂಚಾಯತ್ ಚುನಾವಣೆಗೂ ಮುನ್ನ ಹಿಂದುಳಿದ ವರ್ಗಗಳ ಮೀಸಲಾತಿ ಪರಿಷ್ಕರಿಸಲು ಆಗ್ರಹ

ರಾಯಚೂರು, ಅ.12: ರಾಜ್ಯದಲ್ಲಿ ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ನಡೆಸುವ ಮೊದಲು ಹಿಂದುಳಿದ ವರ್ಗಗಳ ಮೀಸಲಾತಿ ವರ್ಗೀಕರಣಕ್ಕೆ ಸಂಬಂಧಿಸಿದ 1995ರ ಸರ್ಕಾರದ ಅಧಿಸೂಚನೆಯನ್ನು ಪರಿಷ್ಕರಿಸಬೇಕು. ಅಲ್ಲದೆ, ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಏಕರೂಪದ ಚುನಾವಣಾ ನೀತಿ ಜಾರಿಗೊಳಿಸಿ, ಸ್ಥಳೀಯ ಸ್ವಯಂ ಆಡಳಿತದ ಮೂಲ ಆಶಯವನ್ನು ಕಾಪಾಡಬೇಕು ಎಂದು ಹಿಂದುಳಿದ ವರ್ಗಗಳ ಮುಖಂಡ ಅಂಬಾಜೀರಾವ್ ಮೈದರ್ಕರ್ ಹಾಗೂ ಕರ್ನಾಟಕ ಪರಿಶಿಷ್ಟ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತದ ಸಂವಿಧಾನದ ಭಾಗ-4ರ ಅನುಚ್ಛೇದ



40ರ ಪ್ರಕಾರ ಗ್ರಾಮ ಪಂಚಾಯಿತಿಗಳನ್ನು ಸ್ವಯಂ ಆಡಳಿತ ಘಟಕಗಳಾಗಿ ಸಂಘಟಿಸಿ, ಅವುಗಳ ಕಾರ್ಯನಿರ್ವಹಣೆಗೆ ಅಗತ್ಯ ಅಧಿಕಾರ ನೀಡುವ ಜವಾಬ್ದಾರಿ ರಾಜ್ಯ ಸರ್ಕಾರದ್ದಾಗಿದೆ. ಸಂವಿಧಾನದ 243-ಬಿ ವಿಧಿಯು ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆಗೆ ಅವಕಾಶ ಕಲ್ಪಿಸಿದ್ದು, ಅದರಂತೆ ಕರ್ನಾಟಕ ಸರ್ಕಾರವು 1993ರಲ್ಲಿ ಪಂಚಾಯತ್ ರಾಜ್ ಕಾಯ್ದೆಯನ್ನು ಜಾರಿಗೆ ತಂದಿದೆ ಎಂದು ವಿವರಿಸಿದರು.

ಕರ್ನಾಟಕ ಹೈಕೋರ್ಟ್ 2002ರ ವಸಂತಕುಮಾರ ಶೆಟ್ಟಿ ಪ್ರಕರಣದಲ್ಲಿಯೂ ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆಯ ಕುರಿತು ಉಲ್ಲೇಖಿಸಿದೆ. ಆದರೆ, ಗ್ರಾಮ ಪಂಚಾಯತ್ ಚುನಾವಣೆಗಳನ್ನು ರಾಜಕೀಯ ಪಕ್ಷಗಳ ರಹಿತವಾಗಿ ನಡೆಸುವ ವ್ಯವಸ್ಥೆ ಇದ್ದರೂ ತಾಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ಪಕ್ಷಾಧಾರಿತವಾಗಿ ನಡೆಸುತ್ತಿರುವುದು ಸ್ಥಳೀಯ ಸ್ವಯಂ ಆಡಳಿತದ ಆಶಯಕ್ಕೆ ವಿರುದ್ಧವಾಗಿದೆ ಎಂದು ಆರೋಪಿಸಿದರು.

ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯ ಪರಿಚ್ಛೇದ 7(2)ರ ಪ್ರಕಾರ ಗ್ರಾಮ ಪಂಚಾಯತ್ ಚುನಾವಣೆಗಳನ್ನು 2ನೇ ಪುಟಕ್ಕೆ

# ನವರಾತ್ರಿ ಸಂಭ್ರಮ: ನಾಣ್ಯಗಳ ಅಲಂಕಾರದಲ್ಲಿ ಕಂಗೊಳಿಸಿದ ವಾಸವಿ ಮಾತೆ



ಮಾನ್ವಿ: ಪಟ್ಟಣದ ಶ್ರೀ ನಗರೇಶ್ವರ ಸ್ವಾಮಿ ಹಾಗೂ ವಾಸವಿ ಮಾತೆಯ ದೇವಸ್ಥಾನದಲ್ಲಿ ನವರಾತ್ರಿ ಮಹೋತ್ಸವದ ಅಂಗವಾಗಿ ಶ್ರೀ ವಾಸವಿ ಅಮ್ಮನವರಿಗೆ ನಾಣ್ಯಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು.

ನವರಾತ್ರಿ ಉತ್ಸವದ ಪ್ರಯುಕ್ತ ವಾಸವಿ ಮಾತೆಯ ಮೂರ್ತಿಯನ್ನು ವಿವಿಧ ನಾಣ್ಯಗಳಿಂದ ಅಲಂಕರಿಸಿದ್ದು, ದೇವಿಯ ವಿಶೇಷ ಅಲಂಕಾರ ಭಕ್ತರ ಗಮನ ಸೆಳೆಯಿತು. ನಾಣ್ಯಗಳ ಅಲಂಕಾರದಲ್ಲಿ ಕಂಗೊಳಿಸಿದ ವಾಸವಿ ಮಾತೆಯ ದರ್ಶನ ಪಡೆದು ಭಕ್ತರು ಭಕ್ತಿಭಾವದಿಂದ ಪೂಜೆ ಸಲ್ಲಿಸಿದರು.

ನವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಧಾರ್ಮಿಕ ವಾತಾವರಣ ಮನೆಮಾಡಿದ್ದು, ದೇವಿಯ ವಿಶೇಷ ಅಲಂಕಾರ ಉತ್ಸವದ ಸಂಭ್ರಮವನ್ನು ಹೆಚ್ಚಿಸಿತು. ಭಕ್ತರು ದೇವಸ್ಥಾನಕ್ಕೆ ಆಗಮಿಸಿ ವಾಸವಿ ಮಾತೆಯ ದರ್ಶನ ಪಡೆದು ತಮ್ಮ ಕುಟುಂಬದ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

# ಅ. 17ರಂದು ಕನ್ನಡ ರಾಜ್ಯೋತ್ಸವ ಪೂರ್ವಭಾವಿ ಸಭೆ

ರಾಯಚೂರು ಅ. 12 (ಕರ್ನಾಟಕ ವಾರ್ತೆ): ಪ್ರತಿ ವರ್ಷದಂತೆ ಈ ವರ್ಷವು ಕೂಡ ನವೆಂಬರ್ 01ರಂದು ನಡೆಯುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಚರಿಸುವ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 17ರ ಬೆಳಿಗ್ಗೆ 11ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲೆಯ ಕನ್ನಡ ಪರ ಸಂಘಟನೆಯ ಮುಖಂಡರು ಭಾಗವಹಿಸಿ, ತಮ್ಮ ಅಮೂಲ್ಯವಾದ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೋಷಕತ್ವ ಯೋಜನೆಯಡಿ ಅರ್ಹ ಪೋಷಕ ರಿಂದ ಅರ್ಜಿ

ರಾಯಚೂರು ಅ. 12 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಪೋಷಕತ್ವ ಮಾರ್ಗಸೂಚಿಯಂತೆ ಅರ್ಹ ಸಂಭವನೀಯ ಸಾಕು ಪೋಷಕರಿಂದ ಪೋಷಕತ್ವ ಯೋಜನೆಯಡಿ ಅರ್ಹ ಪೋಷಕರಿಂದ ಅರ್ಜಿ ಆಹ್ವಾನಿಸಲಾಗಿದೆ.

0-18 ವರ್ಷದೊಳಗಿನ ಮಕ್ಕಳ ಪೋಷಣೆ ಮತ್ತು ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿದ್ದು, ಪೋಷಕತ್ವ ಎಂದರೆ ಮಕ್ಕಳ ಕಲ್ಯಾಣ ಸಮಿತಿಯು ಮಗುವಿನ ರಕ್ಷಣೆಯನ್ನು ಜೈವಿಕ ಕುಟುಂಬವನ್ನು ಹೊರತುಪಡಿಸಿ, ಮತ್ತೊಂದು ಕೌಟುಂಬಿಕ ವಾತಾವರಣ ಹೊಂದಿರುವ ಪರ್ಯಾಯ ವ್ಯವಸ್ಥೆಯಲ್ಲಿ ಇರಿಸುವುದನ್ನು ಪೋಷಕತ್ವ ಎನ್ನಬಹುದು. ಈ ಪರ್ಯಾಯ ವ್ಯವಸ್ಥೆಯ ಮಕ್ಕಳ ಕಲ್ಯಾಣ ಸಮಿತಿಯಿಂದ ಆಯ್ಕೆ ಮಾಡಿ, ಅರ್ಹತೆ ಹೊಂದಿರುವ, ಅಂಗೀಕಾರ ಪಡೆದಿರುವ ಹಾಗೂ ಮಕ್ಕಳ ರಕ್ಷಣೆಯನ್ನು ಮೇಲ್ವಿಚಾರಣೆಗೆ ಒಳಪಡುವ ವ್ಯವಸ್ಥೆಯಾಗಿದೆ. ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಬಾಲನ್ಯಾಯ ಕಾಯ್ದೆ-2015ರ ಸೆಕ್ಷನ್(44) ರನ್ವಯ ಪೋಷಕತ್ವ ಯೋಜನೆಯಲ್ಲಿ ಮಕ್ಕಳನ್ನು ಇರಿಸಲು ಗುರುತಿಸಲ್ಪಟ್ಟ ಕುಟುಂಬ,ಮಕ್ಕಳು ಕುಟುಂಬದ ವಾತವರಣದಲ್ಲಿ ಬೆಳೆಯಲು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ರಾಯಚೂರು ಆದೇಶದ ಮೇರೆಗೆ ಕುಟುಂಬದಲ್ಲಿ ತಾತ್ಕಾಲಿಕವಾಗಿ ಅಥವಾ ವಿಸ್ತರಿಸಲ್ಪಟ್ಟ ಅವಧಿಗೆ ಮಕ್ಕಳನ್ನು ಪೋಷಕತ್ವ ಯೋಜನೆಯಡಿಯಲ್ಲಿ (ಈಣಡಿ ಅಚಿಡಿ) ನೀಡಬಹುದಾಗಿದೆ.

ರಾಯಚೂರು ಜಿಲ್ಲೆಯಲ್ಲಿ ಮಕ್ಕಳಿಲ್ಲದ ದಂಪತಿಗಳು, ಏಕ ಪೋಷಕ ಕುಟುಂಬಸ್ಥರು, ಮಕ್ಕಳಿಗೆ ಪೋಷಣೆ ಮತ್ತು ರಕ್ಷಣೆ ನೀಡಲು ಆಸಕ್ತಿ ಇರುವವರು ಈ ಕಛೇರಿಯ ವಿಳಾಸ: ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮನೆ ಸಂಖ್ಯೆ: 1-9-138, ಪಶ್ಚಿಮ ಪೊಲೀಸ್ ಠಾಣೆ ಹಿಂದೆ, ಮಾರಮ್ಮಗುಡಿ ಎದುರುಗಡೆ, ಗೋಲ್ ಮಾರ್ಕೆಟ್, ಆಜಾದ್ ನಗರ ರಾಯಚೂರು-584101. ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅಥವಾ ದೂರವಾಣಿ ಸಂಖ್ಯೆ-08532-226226, 8618362385, 9731603295, 8660627793ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ವಾಣಿ

ಸುಂದರ ಶರೀರದೊಳಗಿನ
ಕೆಟ್ಟ ಮನಸು ಬಂಗಾರದ
ಪಾತ್ರೆಯಲ್ಲಿನ ಹಳಸಿದ
ಅನ್ನದಂತೆ.

1614 ನೇಯ ದಿನಕ್ಕೆ ಏಮ್ಸ್ ಹೋರಾಟ

# ಕ್ರೀಡೆಯಿಂದ ದೈಹಿಕ ಆರೋಗ್ಯ, ಮಾನಸಿಕ ಸದೃಢತೆ ಬೆಳೆಸುವ ಅತ್ಯುತ್ತಮ ಸಾಧನ: ಜಿ.ಹರೀಶ್



ರಾಯಚೂರು ಅ. 12 (ಕರ್ನಾಟಕ ವಾರ್ತೆ): ಆರೋಗ್ಯಕರ ದೇಹದಲ್ಲಿ ಆರೋಗ್ಯಕರ ಮನಸ್ಸು ಕ್ರೀಡೆ ಎನ್ನುವುದು ಕೇವಲ ಗೆಲುವು ಮತ್ತು ಸೋಲಿನ ವಿಚಾರವಲ್ಲ ಕ್ರೀಡೆ ನಮ್ಮ ದೈಹಿಕ ಆರೋಗ್ಯ, ಮಾನಸಿಕ ಸದೃಢತೆ, ಶಿಸ್ತು ಸಮಯಪಾಲನೆ, ಆತ್ಮವಿಶ್ವಾಸ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಅತ್ಯುತ್ತಮ ಸಾದನವಾಗಿದೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಜಿ.ಹರೀಶ್ ಅವರು ಹೇಳಿದರು.

ಅಕ್ಟೋಬರ್ 08ರ ಗುರುವಾರ ದಂದು ರಾಯಚೂರು ಜಿಲ್ಲಾ ಪೊಲೀಸ್ ಪರೇಡ್ ಮೈದಾನದಲ್ಲಿ ಗೃಹ ರಕ್ಷಕರ ವಾರ್ಷಿಕ ವೃತ್ತಿಪರ ಹಾಗೂ ಕ್ರೀಡಾಕೂಟ-2026ರ ಜಿಲ್ಲಾ ಮಟ್ಟದ ಕ್ರೀಡಾಕೂಟ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮೈದಾನದಲ್ಲಿ ನಾವು ಗೆಲ್ಲುವುದಕ್ಕಿಂತ ಮೊದಲು, ನಮ್ಮ ಸೋಮರಿತನವನ್ನು ಗೆಲ್ಲಬೇಕು. ಪ್ರತಿದಿನದ ಅಭ್ಯಾಸ, ಪರಿಶ್ರಮ ಮತ್ತು ಶಿಸ್ತಿನಿಂದ ಮಾತ್ರ ಉತ್ತಮ ಕ್ರೀಡಾಪಟುವಾಗಲು ಸಾಧ್ಯ. ಕ್ರೀಡೆ ನಮಗೆ ತಂಡದ ಮನೋಭವವನ್ನು ಕಲಿಸುತ್ತದೆ. ಒಬ್ಬರ ಯಶಸ್ಸಿಗೆ ಮತ್ತೊಬ್ಬರ ಸಹಕಾರ ನೀಡುವುದು, ಎದುರಾಳಿಯನ್ನು ಗೌರವಿಸುವುದು ಮತ್ತು ಗೆಲುವನ್ನು ವಿನಯದಿಂದ ಸ್ವೀಕರಿಸುವುದು- ಇವೆಲ್ಲವೂ ಕ್ರೀಡೆಯಿಂದ ನಾವು ಕಲಿಯುವ ಜೀವನದ ಅಮೂಲ್ಯ ಪಾಠಗಳಾಗಿವೆ ಎಂದರು.

ಗೆಲುವು ಸಾದಿಸುವುದು ಮುಖ್ಯವಾದರು, ಪ್ರಾಮಾಣಿಕವಾಗಿ ಮತ್ತು ಕ್ರೀಡಾಸ್ಪೂರ್ತಿಯಿಂದ ಸ್ಪರ್ದಿಸುವುದು ಇನ್ನೂ ಮುಖ್ಯ. ನಮ್ಮ ಯುವಜನತೆ ಶಿಕ್ಷಣದ ಜೋತೆಗೆ ಕ್ರೀಡೆಗೂ ಸಮಾನ ಮಹತ್ವ ನೀಡಬೇಕು ಆರೋಗ್ಯಕರ ದೇಹದಲ್ಲಿ ಆರೋಗ್ಯಕರ ಮನಸ್ಸು ಎಂಬ ಮಾತನ್ನು ಜೀವನದಲ್ಲಿ ಅಳವಡಿಸಿಕೊಂಡು ಪ್ರತಿಯೊಬ್ಬರು ಕ್ರೀಡೆಯಲ್ಲಿ ಭಾಗವಹಿಸಬೇಕು ಎಂದರು.

ಈ ಕ್ರೀಡಾ ಸಮಾರಂಭವು ಎಲ್ಲಾ ಕ್ರೀಡಾಪಟುಗಳ ಪ್ರತಿಭೆಯನ್ನು ಹೊರತರುವುದರ ಜೊತೆಗೆ ಅವರಲ್ಲಿ ಶಿಸ್ತು ಆತ್ಮವಿಶ್ವಾಸ ಮತ್ತು ಸ್ನೇಹಭಾವವನ್ನು ಬೆಳೆಸಲಿ ಎಂದರು.

ಸದೃಢ ದೇಹ ಮತ್ತು ಸದೃಢ ಮನಸ್ಸುಯುಳ್ಳ ಗೃಹರಕ್ಷಕರಾದ ನೀವುಗಳು ಸದಾ ಆರೋಗ್ಯದಿಂದಿರಲು ಗೃಹರಕ್ಷಕರು ನಿರಂತರವಾಗಿ ಸದೃಢವಾಗಿರಲು ಈ ಕ್ರೀಡಾಕೂಟಗಳು ತುಂಬ ಅವಶ್ಯಕವಾಗಿದೆ. ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಗಳು ರಕ್ತದಾನ ಮಾಡಿ ಜೀವ ಉಳಿಸಿ, ದೇಹದ ವಿವಿಧ ಅಂಗಗಳನ್ನು ದಾನ ಮಾಡುವುದು ಶ್ರೇಷ್ಠವಾದ ಕಾರ್ಯವಾಗಿದ್ದು, ಅಲ್ಲದೆ ಮಾನವರಾದ ನಾವುಗಳು ಇತರೆ ಮಾನವರಿಗೆ ದಾನ ಮಾಡುವುದು ಆದ್ಯ ಕರ್ತವ್ಯವಾಗಿದೆ. ಅ ನಿಟ್ಟಿನಲ್ಲಿ ಗೃಹರಕ್ಷಕರು ಪ್ರತಿಯೊಂದು ಕ್ರೀಢೆಗಳಲ್ಲಿ ಭಾಗವಹಿಸಿ ಉತ್ತಮವಾದ ಆರೋಗ್ಯವನ್ನು ಪಡೆದು ಸಮಾಜ ಸೇವೆಯನ್ನು ಮಾಡಿರಿ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಗೃಹರಕ್ಷಕದಳ ಸಮಾದೇಷ್ಟರಾದ ದೀಪಾ ಗೋಡೆಪಾಡ್ ಎಸ್.ಎ ಅವರು ವಿಜೇತರಾದ ಗೃಹರಕ್ಷಕರಿಗೆ ಬಹುಮಾನಗಳನ್ನು ವಿತರಿಸಿ, ಮಾತನಾಡಿ, ಸ್ಪರ್ಧಾತ್ಮಕ ಜಗತ್ತಿನಲ್ಲಿ ಉತ್ತಮವಾದ ಜೀವನವನ್ನು ಕಟ್ಟಿಕೊಳ್ಳಲು ಉತ್ತಮವಾದ ಅಲೋಚನೆ, ಶ್ರಮದಿಂದ ಮಾತ್ರ ಸಾಧ್ಯ. ಜಿಲ್ಲಾ ಮಟ್ಟದಲ್ಲಿ ವಿವಿಧ ಕ್ರೀಡೆಗಳಲ್ಲಿ ವಿಜೇತರಾದವರು ಮುಂದಿನ ಸ್ಪರ್ಧೆಗಳಲ್ಲಿ ಭಾಗವಹಿಸಿ, ಜಿಲ್ಲೆಗೆ ಕೀರ್ತಿ ತರಲು ಗೃಹಕ್ಷಕರಿಗೆ ಶುಭ ಹಾರೈಸಿದರು.

ವಿವಿಧ ಕ್ರೀಡೆ ಆಯೋಜನೆ: ರಾಯಚೂರು ನಗರದ ಜಿಲ್ಲಾ ಪೊಲೀಸ್ ಪರೇಡ್ ಮೈದಾನದಲ್ಲಿ ನಡೆದ ಕ್ರೀಡಾಕೂಟದಲ್ಲಿ ಪುರುಷ ಮತ್ತು ಮಹಿಳಾ ವಿಭಾಗಗಳಿಗೆ ಸ್ಕ್ವಾಡ್ರಿಲ್, ಪ್ರಥಮ ಚಿಕಿತ್ಸೆ, ವಾಲಿಬಾಲ್, ಕಬಡ್ಡಿ, ರೈಫಲ್ ಡ್ರೀಲ್, ಹೈ-ಜಂಪ್, ಲಾಂಗ್ ಜಂಪ್, ಗುಂಡು ಎಸೆತ, ಹಗ್ಗ ಜಗ್ಗಾಟ, 100 ಮೀಟರ್ ಓಟ್, 800 ಮೀಟರ್ ಓಟ್, ಹಾಗೂ 4★100 ಮೀಟರ್ ರಿಲೆ ಹಾಗೂ ಇನ್ನಿತರ ಕ್ರೀಡೆಗಳ ನಡೆಸಲಾಯಿತು.

ಇಲಾಖೆಯ ಸಿಬ್ಬಂದಿಗಳು ಆಸಕ್ತಿಯಿಂದ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಹಾಯಕ ಭೋದಕರು ಬಸವರಾಜ ಶಿದ್ರಾಹುರ್ತಾ, ಗೃಹರಕ್ಷಕ ಅಧಿಕಾರಿಗಳಾದ, ನಿಂಬನಗೌಡ, ತಿಮ್ಮನಗೌಡ, ವರದರಾಜ.ಕೆ, ಚನ್ನಪ್ಪಗೌಡ, ವೀರಭದ್ರಪ್ಪ, ಮಲ್ಲಪ್ಪ, ಎನ್.ಸಿ.ಓ ಬಸವಂತ ಸಿಂಗ್, ಶ್ರೀ ಎನ್.ತಿಮ್ಮಪ್ಪ, ಶಿವಪ್ಪ, ಎಂ.ಚದ್ರಶೇಖರ್, ಶಾಂತಪ್ಪ, ವಾಹನ ಚಾಲಕ ಮಂಜುನಾಥ ದೇಸಾಯಿ ಸೇರಿದಂತೆ ವಿವಿಧ ತಾಲ್ಲೂಕು ಘಟಕಗಳ ಗೃಹರಕ್ಷಕರು-ಗೃಹರಕ್ಷಕಿಯರು ಇದ್ದರು.

# ಯುವ ಜನತೆಯು ಹೆಚ್‌ಐವಿಯಂತಹ ಮಾರಕ ರೋಗದ ವಿರುದ್ಧ ಜಾಗೃತರಾಗಬೇಕು: ಡಿಹೆಚ್‌ಓ ಡಾ.ನಂದಿತಾ ಎಮ್.ಎನ್



ರಾಯಚೂರು ಅ. 12 (ಕರ್ನಾಟಕ ವಾರ್ತೆ): ದೇಹದಲ್ಲಿ ಒಮ್ಮೆ ಹೆಚ್‌ಐವಿ ವೈರಸ್ ಪ್ರವೇಶ ಮಾಡಿದರೆ ಜೀವನ ಪೂರ್ತಿ ಸೋಂಕಿತರನ್ನಾಗಿಸುವ ಹೆಚ್‌ಐವಿಯನ್ನು ಎಲ್ಲರೂ ಸೇರಿ ನಿಯಂತ್ರಣಗೊಳಿಸಬೇಕಿದೆ. ಯುವಜನತೆಯು ಹೆಚ್ ಐವಿ ಸೋಂಕಿಗೆ ಒಳಗಾಗದಂತೆ ಜಾಗೃತಿ ನೀಡುವ ಕಾರ್ಯವನ್ನು ನಾವೆಲ್ಲರೂ ಮಾಡೋಣವೆಂದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್ ಎನ್ ತಿಳಿಸಿದರು.

ಅಕ್ಟೋಬರ್ 12ರ ಸೋಮವಾರ ದಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪೋಲಿಸ್ ಇಲಾಖೆ, ಕ್ರೀಡಾ ಇಲಾಖೆ, ಪದವಿ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ, ಎನ್‌ಎಸ್‌ಎಸ್ ವಿಭಾಗ, ರಿಮ್ಸ್, ರೆಡ್‌ಕ್ರಾಸ್, ರೆಡ್ ರಿಬ್ಬನ್, ಸೈಂಟ್‌ಲೂಕ್, ಹೊಸ ಬೆಳಕು ಸಂಸ್ಥೆಗಳ ಸಂಯೊಗದೊದಿಗೆ ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಮೂಲಕ ಕಾಲೇಜು ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಯುವಜನೋತ್ಸವ ರೆಡ್ ರಿಬ್ಬನ್-ಐದು ಕಿಮಿ ಮ್ಯಾರಾಥಾನ್ ಓಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಪರಿಚಿತರೊಂದಿಗೆ ಲೈಂಗಿಕ ಸಂಪರ್ಕ, ಉಪಯೋಗಿಸಿದ ಸಿರೆಂಜ್ ಬಳಕೆ, ಪರೀಕ್ಷೆಗೆ ಒಳಪಡಿಸದ ಅಸುರಕ್ಷಿತ ರಕ್ತ ಪಡೆಯುವಿಕೆ ಹಾಗೂ ಸೊಂಕೀತ ತಾಯಿಯಿಂದ ಮಗುವಿಗೆ ಬರುವ ಸಾಧ್ಯತೆಗಳಿದ್ದು, ಮೊದಲ ಎರಡು ಸ್ವಯಂ ತಪ್ಪಿನಿಂದ ಆಗುವುದನ್ನು ನಾವು ಎಲ್ಲರಿಗೂ ತಿಳಿಸುವ ಜೊತೆಗೆ ಹದಿಹರೆಯದವರನ್ನು ಭವಿಷ್ಯದಲ್ಲಿ ಹೆಚ್ ಐವಿ ಸೋಂಕಿತರಾಗದತೆ ಇಂದಿನಿದಲೆ ಜಾಗೃತಿ ನೀಡಬೇಕಿದೆ ಎಂದರು.

ಹೆಚ್‌ಐವಿ ತಡೆಗೆ ಸ್ವಯಂ ಪ್ರೇರಣೆಯಿಂದ ಕ್ಯೂಆರ್ ಕೋಡ್ ಮೂಲಕ ಪ್ರಶ್ನೋತ್ತರ ಮೂಲಕ ಸ್ವತಃ ಸ್ಥಿತಿಗತಿ ತಿಳಿದುಕೊಳ್ಳಬಹುದಾಗಿದ್ದು, ಮಾಹಿತಿಗಾಗಿ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಬೇಟಿ ನೀಡಬಹುದಾಗಿದೆ ಎಂದರು.

05 ಕಿಮೀ ಮ್ಯಾರಾಥಾನ್: ಮಹಾತ್ಮಾ ಗಾಂಧಿಜಿ ಜಿಲ್ಲಾ ಕ್ರೀಡಾಂಗಣದಿದ ಸ್ಟೇಷನ್ ರಸ್ತೆ, ಮಂತ್ರಾಲಯ ರಸ್ತೆ, ಮೂಲಕ ಅಥಿತಿ ಹೊಟೆಲ್ ನಿಂದ ಪುನಃ, ಕ್ರೀಡಾಂಗಣದವರೆಗೆ ಮ್ಯಾರಾಥಾನ್ ಜರುಗಿತು. ಕಾಲೇಜು ವಿಧ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ವಿಜೇತ ವಿಧ್ಯಾರ್ಥಿಗಳು, ವಿಜೇತರಿಗೆ ಪ್ರಥಮ ಬಹುಮಾನ 5000, ದ್ವಿತೀಯ ಬಹುಮಾನ 3000 ಹಾಗೂ ತೃತೀಯ ಬಹುಮಾನ 2000 ನಗದು ಪುರಸ್ಕಾರ ಹಾಗೂ ಪ್ರಶಸ್ತಿ ಪತ್ರ ನೀಡಲಾಯಿತು.

ಇದೇ ಸಂದರ್ಭದಲ್ಲಿ ರಿಮ್ಸ್ ಪ್ರಭಾರಿ ಡೀನ್ ಡಾ.ಮಂಜುನಾಥ್, ಪ್ರಭಾರಿ ವೈದ್ಯಕೀಯ ಅಧಿಕ್ಷಕರು ಡಾ.ಅಮರ್ ವರ್ಮ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಹಾಗೂ ಡ್ಯಾಪ್ಕೋ ಅಧಿಕಾರಿ ಡಾ.ಯಶೋಧಾ, ಎನ್‌ಎಸ್‌ಎಸ್ ಅಧಿಕಾರಿ ಡಾ.ಸಂತೋಷ್ ಕುಮಾರ್, ಜಿಲ್ಲಾ ರೆಡ್ ಕ್ರಾಸ್ ಸಂಚಾಲಕ ಡಾ.ದಂಡಪ್ಪ ಬಿರಾದಾರ್, ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಡ್ಯಾಪ್ಕೋ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ಬಿಹೆಚ್‌ಇಓ ನಾಗರಾಜ್, ಹೊಸ ಬೆಳಕು ಸಂಸ್ಥೆಯ ದೇವರಾಜ್ ಸೇರಿದಂತೆ, ಪೊಲೀಸ್ ಸಿಬ್ಬಂದಿ, ದೈಹಿಕ ಶಿಕ್ಷಕರು, ಡ್ಯಾಪ್ಕೋ ಸಿಬ್ಬಂದಿಗಳು ಇದ್ದರು.

## ಮೊದಲನೇ ಪುಟದಿಂದ

# ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ನೇಮಕ

ಮಹೇಂದ್ರಗಢ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದ ಅವರು, 1999ರಿಂದ 2004ರವರೆಗೆ ಸಂಸದರಾಗಿ ಕಾರ್ಯನಿರ್ವಹಿಸಿದ್ದಾರೆ.

ಬಿಜೆಪಿಯ ರಾಷ್ಟ್ರೀಯ ಸಂಘಟನೆಯಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿರುವ ಸುಧಾ ಯಾದವ್ ಅವರು ಪಕ್ಷದ ಸಂಸದೀಯ ಮಂಡಳಿ ಹಾಗೂ ಕೇಂದ್ರ ಚುನಾವಣಾ ಸಮಿತಿಯ ಸದಸ್ಯೆಯಾಗಿ ಕಾರ್ಯನಿರ್ವಹಿಸಿದ್ದಾರೆ. ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯೆಯಾಗಿಯೂ ಸೇವೆ ಸಲ್ಲಿಸಿರುವ ಅವರು, ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಅನುಭವ ಹೊಂದಿದ್ದಾರೆ.

ರಾಷ್ಟ್ರಪತಿ ಭವನದ ಪ್ರಕಟಣೆಯ ಪ್ರಕಾರ, ನೂತನವಾಗಿ ನೇಮಕಗೊಂಡ ಎಲ್ಲ ರಾಜ್ಯಪಾಲರು ತಮ್ಮ ತಮ್ಮ ರಾಜ್ಯಗಳಲ್ಲಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಿದ ದಿನದಿಂದ ನೇಮಕಾತಿಗಳು ಜಾರಿಗೆ ಬರಲಿವೆ.

# ಪಂಚಾಯತ್ ಚುನಾವಣೆಗೂ ಮುನ್ನ ಹಿಂದುಳಿದ ವರ್ಗಗಳ ಮೀಸಲಾತಿ ಪರಿಷ್ಕರಿಸಲು ಆಗ್ರಹ

ರಾಜಕೀಯ ಪಕ್ಷಗಳ ರಹಿತವಾಗಿ ನಡೆಸಬೇಕು. ಆದರೆ, ಪರಿಚ್ಛೇದ 130(2) ಮತ್ತು 169(2)ರ ಪ್ರಕಾರ ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ಬ್ಯಾಲೆಟ್ ಅಥವಾ ಇವಿಎಂ ಮೂಲಕ ನಡೆಸುವ ವ್ಯವಸ್ಥೆ ಇದೆ. ಈ ನಿಬಂಧನೆಗಳನ್ನು ಆಧರಿಸಿ ತಾಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳಲ್ಲಿ ರಾಜಕೀಯ ಪಕ್ಷಗಳ ಭಾಗವಹಿಸುವಿಕೆಗೆ ಅವಕಾಶ ನೀಡಿರುವುದು ಸರಿಯಲ್ಲ ಎಂದು ಅವರು ಆಕ್ಷೇಪ ವ್ಯಕ್ತಪಡಿಸಿದರು.

ಅಲ್ಲದೆ, ಗ್ರಾಮ ಪಂಚಾಯತ್ ಸದಸ್ಯರಾಗಲು ಅನ್ವಯಿಸುವ ಅರ್ಹತೆ ಮತ್ತು ಅನರ್ಹತೆಗಳಿಗೆ ಸಂಬಂಧಿಸಿದ ಪರಿಚ್ಛೇದ 26ರಿಂದ 40ರವರೆಗಿನ ನಿಯಮಗಳನ್ನೇ ತಾಲೂಕು ಪಂಚಾಯತ್‌ಗೆ ಪರಿಚ್ಛೇದ 132(3) ಹಾಗೂ ಜಿಲ್ಲಾ ಪಂಚಾಯತ್‌ಗೆ ಪರಿಚ್ಛೇದ 169(3)ರ ಮೂಲಕ ಅನ್ವಯಿಸಲಾಗಿದೆ. ಹೀಗಿರುವಾಗ ಚುನಾವಣಾ ವ್ಯವಸ್ಥೆಯಲ್ಲಿಯೂ ಏಕರೂಪತೆ ಇರಬೇಕು ಎಂದು ಪ್ರತಿಪಾದಿಸಿದರು.

ರಾಜಕೀಯ ಪಕ್ಷಗಳ ಬಿ-ಫಾರಂ ಪಡೆದು ಆಯ್ಕೆಯಾಗುವ ತಾಲೂಕು ಮತ್ತು ಜಿಲ್ಲಾ ಪಂಚಾಯತ್ ಸದಸ್ಯರು ಗ್ರಾಮೀಣ ಜನರ ಹಿತಾಸಕ್ತಿಗಿಂತ ಪಕ್ಷದ ನಿರ್ಧಾರಗಳಿಗೆ ಬದ್ಧರಾಗಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಸಂದರ್ಭದಲ್ಲಿಯೂ ಪಕ್ಷದ ಮುಖಂಡರ ಸೂಚನೆಗಳನ್ನು ಪಾಲಿಸಬೇಕಾಗುತ್ತದೆ. ಪಕ್ಷದ ವಿಪ್ ಉಲ್ಲಂಘಿಸಿದರೆ ಶಿಸ್ತುಕ್ರಮ ಎದುರಿಸುವ ಸಾಧ್ಯತೆ ಇರುವುದರಿಂದ ಸದಸ್ಯರ ಸ್ವತಂತ್ರ ನಿರ್ಧಾರಕ್ಕೆ ಅಡ್ಡಿಯಾಗುತ್ತದೆ. ಇದು ಸಂವಿಧಾನದ ಅನುಚ್ಛೇದ 19(1)(ಎ) ರಡಿ ದೊರೆಯುವ ಅಭಿವ್ಯಕ್ತಿ ಸ್ವಾತಂತ್ರ್ಯದ ಆಶಯಕ್ಕೂ ಧಕ್ಕೆ ತರುತ್ತದೆ ಎಂದು ಅಭಿಪ್ರಾಯಪಟ್ಟರು.

ಗ್ರಾಮೀಣ ಪ್ರದೇಶಗಳಲ್ಲಿ ರಾಜಕೀಯ ಪಕ್ಷಗಳು ತಮ್ಮ ಪ್ರಾಬಲ್ಯ ಉಳಿಸಿಕೊಳ್ಳುವ ಉದ್ದೇಶದಿಂದ ತಾಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ಪಕ್ಷಾಧಾರಿತವಾಗಿ ನಡೆಸುತ್ತಿವೆ. ಇದರಿಂದ ಗ್ರಾಮೀಣ ಅಭಿವೃದ್ಧಿ ಹಾಗೂ ಜನಪರ ಆಡಳಿತಕ್ಕಿಂತ ಪಕ್ಷ ರಾಜಕಾರಣಕ್ಕೆ ಹೆಚ್ಚಿನ ಆದ್ಯತೆ ದೊರೆಯುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿಗೆ ಸಂಬಂಧಿಸಿದಂತೆ 1995ರ ಜನವರಿ 13ರಂದು ಹೊರಡಿಸಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ 595() ಅನ್ನು ಪ್ರಸ್ತುತ ಜಾತಿ ವರ್ಗೀಕರಣಕ್ಕೆ ಅನುಗುಣವಾಗಿ ತಿದ್ದುಪಡಿ ಮಾಡಬೇಕಾಗಿದೆ. ಪ್ರವರ್ಗ-ಎ ಪಟ್ಟಿಯಲ್ಲಿದ್ದ ಮೇದರ, ಮೇದರಿ, ಗೌರಿಗ, ಬುರುಡ್, ಪರಿವಾರ ಹಾಗೂ ತಳವಾರ ಸಮುದಾಯಗಳನ್ನು ಪರಿಶಿಷ್ಟ ಪಂಗಡಕ್ಕೆ ಮತ್ತು ಕಲ್ಲು ವಡ್ಡರ್, ಮಣ್ಣು ವಡ್ಡರ್ ಹಾಗೂ ಬೋಯಿ (ಬೇಸ್ತರಲ್ಲದ) ಸಮುದಾಯಗಳನ್ನು ಪರಿಶಿಷ್ಟ ಜಾತಿಗೆ ಸೇರಿಸಲಾಗಿದೆ ಎಂದು ಅವರು ಪ್ರತಿಪಾದಿಸಿದರು. ಈ ಬದಲಾವಣೆಗಳನ್ನು ಪರಿಗಣಿಸದೆ ಹಳೆಯ ಅಧಿಸೂಚನೆಯ ಆಧಾರದಲ್ಲಿ ಚುನಾವಣೆ ನಡೆಸುವುದು ಸರಿಯಲ್ಲ ಎಂದು ಹೇಳಿದರು.

ರಾಯಚೂರು ತಾಲೂಕಿನ ಏಳು ಜಿಲ್ಲಾ ಪಂಚಾಯತ್ ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ-ಎ ಪಟ್ಟಿಯಲ್ಲಿರುವ ಕುರುಬ, ಬೆಸ್ತ, ಕಾಟಿಕ, ಉಪ್ಪಾರ, ಗೊಲ್ಲ, ಅಗಸ, ಈಡಿಗ, ಕುಂಬಾರ, ಹೂಗಾರ, ಹಡಪದ, ವಿಶ್ವಕರ್ಮ, ಮುಸ್ಲಿಂ ಹಾಗೂ ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡ ಪರಿಶಿಷ್ಟ ಜಾತಿ ಮೂಲದ ಸಮುದಾಯಗಳಿಗೆ ಮತ್ತು ಪ್ರವರ್ಗ-ಬಿ ಪಟ್ಟಿಯಲ್ಲಿರುವ ಮುನ್ನೂರು ಕಾಪು, ಲಿಂಗಾಯತ, ಮರಾಠ ಹಾಗೂ ಕ್ರೈಸ್ತ ಸಮುದಾಯಗಳಿಗೆ ಮೀಸಲಾತಿ ಏಕೆ ದೊರೆತಿಲ್ಲ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಈ ಸಮುದಾಯಗಳಿಗೆ ರಾಜಕೀಯ ಪ್ರಾತಿನಿಧ್ಯ ದೊರೆಯದಿರುವ ಕುರಿತು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರು ಉತ್ತರ ನೀಡಬೇಕು. ಹಿಂದುಳಿದ ವರ್ಗಗಳ ಎಲ್ಲ ಸಮುದಾಯಗಳಿಗೂ ನ್ಯಾಯಸಮ್ಮತ ಪ್ರಾತಿನಿಧ್ಯ ದೊರೆಯುವಂತೆ ಮೀಸಲಾತಿ ವ್ಯವಸ್ಥೆಯನ್ನು ಮರುಪರಿಶೀಲಿಸಬೇಕು. ರಾಜ್ಯ ಸರ್ಕಾರವು ಸಂಬಂಧಿಸಿದ ಅಧಿಸೂಚನೆಯನ್ನು ತಿದ್ದುಪಡಿ ಮಾಡಿದ ನಂತರವೇ ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ನಡೆಸಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಲಿಂಗಾಯತ ಸಮುದಾಯದ ಮುಖಂಡ ಜೆ. ವೀರಭದ್ರಸ್ವಾಮಿ, ಮಾಲ ಸಮುದಾಯದ ಮುಖಂಡ ಶ್ರೀಕಾಂತ್ ಕಲ್ಲೂರ್, ಮರಾಠ ಸಮುದಾಯದ ಮುಖಂಡ ರಘು ಹಾಗೂ ಮುಸ್ಲಿಂ ಸಮುದಾಯದ ಮುಖಂಡ ಮಸೂದ್ ಅಲಿ ಉಪಸ್ಥಿತರಿದ್ದರು.

# ಅಂತಾರಾಷ್ಟ್ರಿಯ ಹೆಣ್ಣು ಮಕ್ಕಳ ದಿನಾಚರಣೆ



ರಾಯಚೂರು ಅ. 12 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾ ಕಾನೂನು ಸೇವೆಗಳ ಪಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಅಂತಾರಾಷ್ಟ್ರಿಯ ಹೆಣ್ಣು ಮಕ್ಕಳ ದಿನಾಚರಣೆಯನ್ನು ಸರ್ಕಾರಿ ಬಾಲಾಕಿಯರ ಬಾಲಾಮಂದಿರ ರಾಯಚೂರುನಲ್ಲಿ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದ ಉದ್ಘಾಟಕರಾಗಿ ಮಾನ್ಯ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ಬಾಲಕಿಯರ ಬಾಲಾಮಂದಿರದ ಅಧೀಕ್ಷಕರಾದ ಭಾರತಿ ನಾಯಕ, ಭಾಷಣಾಕಾರಾರಾಗಿ ಭಾಗವಹಿಸಿದ ಶ್ರೀದೇವಿ ವಕೀಲರು ಅಂತಾರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದರು ಮಕ್ಕಳಿಗೆ ತಿಳಿ ಹೇಳಿ ಉಜ್ವಲ ಭವಿಷ್ಯನಡಿಗೆ ಸಾಗುವಂತೆ ಸಲಹೆ ಸೂಚನೆಗಳನ್ನು ನೀಡಿದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧೀಕ್ಷಕರಾದ ರಾಧಾಬಾಯಿ, ಕಾನೂನು ಸಲಹಗಾರರಾದ ಶಿವರಾಜ ಹಾಗೂ ಕಚೇರಿಯ ಎಲ್ಲಾ ಸಿಬ್ಬಂದಿ ವರ್ಗದವರು ಇದ್ದರು.

# ಬೆಳೆ ನಷ್ಟ, ಸಾಲದ ಸಂಕಷ್ಟದಿಂದ ರೈತ ಆತ್ಮಹತ್ಯೆ

ಕವಿತಾಳ: ಸಮರ್ಪಕ ಮಳೆಯಿಲ್ಲದೆ ಬೆಳೆ ಹಾನಿಗೊಳಗಾಗಿದ್ದು, ಕೃಷಿಗಾಗಿ ಮಾಡಿದ್ದ ಸಾಲ ತೀರಿಸಲಾಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದ ರೈತರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸಮೀಪದ ಯಕ್ಲಾಸಪುರ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಯಕ್ಲಾಸಪುರ ಗ್ರಾಮದ ಹನುಮಂತ (45) ಮೃತಪಟ್ಟ ರೈತ. ಕೃಷಿ ಚಟುವಟಿಕೆಗಳಿಗಾಗಿ ಹಾಗೂ ಜಮೀನಿನಲ್ಲಿ ಕೊಳವೆಬಾವಿ ಕೊರೆಸಲು ವಿವಿಧ ಬ್ಯಾಂಕ್‌ಗಳು ಮತ್ತು ಖಾಸಗಿಯವರಿಂದ ಲಕ್ಷಾಂತರ ರೂಪಾಯಿ ಸಾಲ ಪಡೆದಿದ್ದರು ಎನ್ನಲಾಗಿದೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸಮರ್ಪಕ ಮಳೆಯಾಗದ ಪರಿಣಾಮ ಜಮೀನಿನಲ್ಲಿ ಬಿತ್ತನೆ ಮಾಡಿದ್ದ ಹತ್ತಿ ಬೆಳೆ ಹಾನಿಗೊಳಗಾಗಿತ್ತು. ಕೊಳವೆಬಾವಿಯಲ್ಲಿಯೂ ನೀರು ಲಭ್ಯವಾಗದ ಕಾರಣ ಬೆಳೆ ಉಳಿಸಿಕೊಳ್ಳಲು ಸಾಧ್ಯವಾಗಿರಲಿಲ್ಲ. ಇದರಿಂದ ನಿರೀಕ್ಷಿತ ಆದಾಯ ದೊರೆಯದೆ ಸಾಲ ಮರುಪಾವತಿ ಮಾಡುವುದು ಕಷ್ಟವಾಗಿತ್ತು ಎಂದು ಕುಟುಂಬದವರು ತಿಳಿಸಿದ್ದಾರೆ.

ಕೃಷಿಯಿಂದ ಆದಾಯ ನಿರೀಕ್ಷಿಸಿದ್ದ ಹನುಮಂತ ಅವರಿಗೆ ಬೆಳೆ ನಷ್ಟದಿಂದ ಆರ್ಥಿಕ ಸಂಕಷ್ಟ ಎದುರಾಗಿತ್ತು. ಸಾಲದ ಹೊರೆ ಮತ್ತು ಬೆಳೆ ಹಾನಿಯಿಂದ ಮನನೊಂದಿದ್ದ ಅವರು ಸೋಮವಾರ ಬೆಳಗ್ಗೆ ಹೊಲಕ್ಕೆ ತೆರಳಿದ ಬಳಿಕ ಆತ್ಮಹತ್ಯೆ ಮಾಡಿಕೊಂಡಿರುವುದು ತಿಳಿದುಬಂದಿದೆ.

ಘಟನೆ ಕುರಿತು ಮೃತ ರೈತನ ಪತ್ನಿ ಮುತ್ತಮ್ಮ ನೀಡಿದ ದೂರಿನ ಆಧಾರದಲ್ಲಿ ಕವಿತಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ಪ್ರಕರಣದ ಕುರಿತು ತನಿಖೆ ಕೈಗೊಂಡಿದ್ದಾರೆ.

# ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ




ದೇವದುರ್ಗ: ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದು, ಖಾಸಗಿ ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ದೇವದುರ್ಗ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟಕ್ಕೆ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.

ಪಟ್ಟಣದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ನೂತನ ಪದಾಧಿಕಾರಿಗಳು ಈ ಕುರಿತು ಮಾಹಿತಿ ನೀಡಿದರು. ಇದಕ್ಕೂ ಮುನ್ನ ಭಾನುವಾರ ಹೂವಿನ ಹೆಡಗಿಯ ನ್ಯಾಷನಲ್ ಸ್ಕೂಲ್‌ನಲ್ಲಿ ನಡೆದ ಒಕ್ಕೂಟದ ಸಭೆಯಲ್ಲಿ ಸಂಸ್ಥಾಪಕ ಸದಸ್ಯರ ಒಪ್ಪಿಗೆಯೊಂದಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.

ಒಕ್ಕೂಟದ ನೂತನ ಅಧ್ಯಕ್ಷ ಮಾರೆಪ್ಪ ಕೊತ್ತದೊಡ್ಡಿ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ಖಾಸಗಿ ಶಿಕ್ಷಣ ಸಂಸ್ಥೆಗಳು ಮಹತ್ವದ ಕೊಡುಗೆ ನೀಡುತ್ತಿವೆ. ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದರ ಜೊತೆಗೆ ಶಿಕ್ಷಕರನ್ನು ಗೌರವಿಸುವುದು, ಮಕ್ಕಳ ಶೈಕ್ಷಣಿಕ ಸಾಧನೆಗೆ ಪ್ರೋತ್ಸಾಹ ನೀಡುವುದು ಹಾಗೂ ವಿವಿಧ ಸಾಮಾಜಮುಖಿ ಚಟುವಟಿಕೆಗಳನ್ನು ನಡೆಸುವ ಮೂಲಕ ಶಿಕ್ಷಣ ಕ್ಷೇತ್ರದ ಬೆಳವಣಿಗೆಗೆ ಶ್ರಮಿಸುತ್ತಿವೆ ಎಂದರು.

ಗ್ರಾಮೀಣ ಭಾಗದ ಮಕ್ಕಳಿಗೂ ಉತ್ತಮ ಶೈಕ್ಷಣಿಕ ಸೌಲಭ್ಯಗಳು ದೊರೆಯಬೇಕು. ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಸಂಘಟಿತವಾಗಿ ಪರಿಹರಿಸಲು ಪ್ರಯತ್ನಿಸಲಾಗುವುದು. ಎಲ್ಲ ಪದಾಧಿಕಾರಿಗಳ ಸಹಕಾರದೊಂದಿಗೆ ಒಕ್ಕೂಟವನ್ನು ಮತ್ತಷ್ಟು ಕ್ರಿಯಾಶೀಲಗೊಳಿಸಲಾಗುವುದು ಎಂದು ಹೇಳಿದರು.

ಒಕ್ಕೂಟದ ಗೌರವಾಧ್ಯಕ್ಷ ತಿರುಪತಿ ಸೂಗೂರು ಮಾತನಾಡಿ, ಸಂಘಟನೆಯ ಅಭಿವೃದ್ಧಿಗೆ ಹಿರಿಯರ ಅನುಭವದ ಜೊತೆಗೆ ಯುವಕರ ನಾಯಕತ್ವವೂ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಯುವ ಪ್ರತಿಭೆಗಳಿಗೆ ಆದ್ಯತೆ ನೀಡಿ ವಿವಿಧ ಜವಾಬ್ದಾರಿಗಳನ್ನು ವಹಿಸಲಾಗಿದೆ. ಶಿಕ್ಷಣ ಸಂಸ್ಥೆಗಳ ಹಿತಾಸಕ್ತಿ ಕಾಪಾಡುವುದು, ಅವುಗಳ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಸಂಘಟನೆಯ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಮುನ್ನಡೆಸುವುದು ನೂತನ ಪದಾಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ದೇಸಾಯಿ ಮಾತನಾಡಿ, ಖಾಸಗಿ ಶಾಲೆಗಳ ಕುರಿತು ಸಾರ್ವಜನಿಕರಲ್ಲಿ ಇರುವ ಕೆಲವು ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವ ಅಗತ್ಯವಿದೆ. ಅನೇಕ ಖಾಸಗಿ ಶಿಕ್ಷಣ ಸಂಸ್ಥೆಗಳು ಕಡಿಮೆ ಶುಲ್ಕದಲ್ಲಿ ಇಂಗ್ಲಿಷ್ ಮಾಧ್ಯಮದ ಶಿಕ್ಷಣ ನೀಡುವುದರ ಜೊತೆಗೆ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಯನ್ನೂ ಒದಗಿಸುತ್ತಿವೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣದಿಂದ ವಂಚಿತರಾಗಬಾರದು ಎಂಬುದು ಒಕ್ಕೂಟದ ಆಶಯವಾಗಿದೆ ಎಂದರು.

ಒಕ್ಕೂಟದ ನೂತನ ಅಧ್ಯಕ್ಷರಾಗಿ ಮಾರೆಪ್ಪ ಕೊತ್ತದೊಡ್ಡಿ, ಪ್ರಧಾನ ಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ದೇಸಾಯಿ (ಗಬ್ಬೂರು), ಖಜಾಂಚಿಯಾಗಿ ಬಸವರಾಜ ಮಡಿವಾಳ (ದೇವದುರ್ಗ) ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಸಿದ್ಧಯ್ಯತಾತಾ (ದೇವದುರ್ಗ), ಮಲ್ಲಪ್ಪ ಕುಂಬಾರ (ಮಸರಕಲ್), ಶಿವಣ್ಣ ಗಲಗ್, ಬಸವರಾಜ ಕೊಪ್ಪರ ಹಾಗೂ ಪಾಮನಗೌಡ ಮಜ್ಜಿಗಿ ಆಯ್ಕೆಯಾಗಿದ್ದಾರೆ.

ಸಂಘಟನಾ ಕಾರ್ಯದರ್ಶಿಗಳಾಗಿ ಸುಭಾಷ್ ಕೊಪ್ಪರ, ಚನ್ನಬಸವ ಗುರುವಿನ್ ತಾತಾ (ಗಬ್ಬೂರು), ಮಲ್ಲು ಹೂಗಾರ್ (ಗಾಣಧಾಳ), ವೆಂಕೋಬ ಮಾನಸಗಲ್ ಹಾಗೂ ಚಾಂದಪಾಷಾ ಆಲ್ಕೋಡ ಅವರನ್ನು ಆಯ್ಕೆ ಮಾಡಲಾಗಿದೆ.

ಕಾನೂನು ಸಲಹೆಗಾರರಾಗಿ ರಾಘವೇಂದ್ರ ಕೋಲ್ಕರ್ (ಜಾಲಹಳ್ಳಿ) ಮತ್ತು ಶರಣಗೌಡ ಪಾಟೀಲ್ (ಮಸರಕಲ್) ನೇಮಕಗೊಂಡಿದ್ದಾರೆ. ಮಾಧ್ಯಮ ಪ್ರತಿನಿಧಿಗಳಾಗಿ ಶರಣು ಪಲ್ಲೇದ (ಬಿ. ಗುಣೇಕಲ್), ಮೇರಾಜ್ ಅಹಮ್ಮದ್ (ಹೂವಿನ ಹೆಡಗಿ) ಹಾಗೂ ಯಲ್ಲಪ್ಪ (ಹೂವಿನ ಹೆಡಗಿ) ಆಯ್ಕೆಯಾಗಿದ್ದಾರೆ.

ಗೌರವಾಧ್ಯಕ್ಷರಾಗಿ ಪ್ರಕಾಶ್ ಬೇಣೀದ್ (ದೇವದುರ್ಗ), ತಿರುಪತಿ ಸೂಗೂರು (ದೇವದುರ್ಗ), ಚನ್ನಪ್ಪ ಬೂದಿನಾಳ (ಗಬ್ಬೂರು) ಹಾಗೂ ಬಸವರಾಜ ಪಂಪಾಪತಿ (ಜಾಲಹಳ್ಳಿ) ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳು ಪರಸ್ಪರ ಸಹಕಾರದೊಂದಿಗೆ ಕಾರ್ಯನಿರ್ವಹಿಸಿ, ಗ್ರಾಮೀಣ ಶಿಕ್ಷಣದ ಗುಣಮಟ್ಟ ಹೆಚ್ಚಿಸುವುದು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗೆ ಒಗ್ಗಟ್ಟಿನಿಂದ ಶ್ರಮಿಸುವುದಾಗಿ ತಿಳಿಸಿದರು.

# ವಾಜಪೇಯಿ ನಗರ ನಿವೇಶನ ಯೋಜನೆಯ ಅಕ್ರಮ ಶೆಡ್‌ಗಳ ತೆರವಿಗೆ ಆಗ್ರಹ



ರಾಯಚೂರು: ವಾಜಪೇಯಿ ನಗರ ನಿವೇಶನ ಯೋಜನೆಯಡಿ ನಿವೇಶನ ರಹಿತರಿಗೆ ಮಂಜೂರಾಗಿರುವ ಸರ್ವೆ ನಂ. 581ರ ಭೂಮಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಶೆಡ್‌ಗಳನ್ನು ತೆರವುಗೊಳಿಸಿ, ನಿವೇಶನ ಅಭಿವೃದ್ಧಿ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಬೇಕು ಎಂದು ಜನಾರ್ಧನ ಹಳ್ಳಿಬೆಂಚಿ ಆಗ್ರಹಿಸಿದರು.

ನಗರದ ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವ ಬಡ ಕುಟುಂಬಗಳು ಹಾಗೂ ಬೀದಿಬದಿಯಲ್ಲಿ ಜೀವನ ನಡೆಸುತ್ತಿರುವ ನಿವೇಶನ ರಹಿತರು ಸುಮಾರು ಹತ್ತು ವರ್ಷಗಳಿಂದ ನಿರಂತರ ಹೋರಾಟ ನಡೆಸಿದ ಪರಿಣಾಮ ವಾಜಪೇಯಿ ನಗರ ನಿವೇಶನ ಯೋಜನೆಯಡಿ ಸರ್ವೆ ನಂ. 581ರಲ್ಲಿ ನಿವೇಶನಗಳನ್ನು ಮಂಜೂರು ಮಾಡಲಾಗಿದೆ. ಆದರೆ ಮಂಜೂರಾದ ಭೂಮಿಯಲ್ಲಿ ಕೆಲ ಸ್ಥಳೀಯ ಜನಪ್ರತಿನಿಧಿಗಳು ಹಣ ಪಡೆದು ಅನರ್ಹ ವ್ಯಕ್ತಿಗಳಿಗೆ ಅಕ್ರಮವಾಗಿ ಶೆಡ್‌ಗಳನ್ನು ನಿರ್ಮಿಸಿಕೊಟ್ಟಿದ್ದಾರೆ ಎಂದು ಆರೋಪಿಸಿದರು.

ಬಡವರು ಸ್ವಂತ ಸೂರಿನ ಕನಸಿನೊಂದಿಗೆ ಹಲವು ವರ್ಷಗಳಿಂದ ನಿವೇಶನಕ್ಕಾಗಿ ಕಾಯುತ್ತಿದ್ದಾರೆ. ಆದರೆ ಮಂಜೂರಾದ ಭೂಮಿಯಲ್ಲಿ ಅಕ್ರಮ ಶೆಡ್‌ಗಳ ನಿರ್ಮಾಣದಿಂದ ನಿಜವಾದ ಫಲಾನುಭವಿಗಳಿಗೆ ನಿವೇಶನ ದೊರೆಯುವ ಪ್ರಕ್ರಿಯೆಗೆ ಅಡ್ಡಿಯಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ ಅಕ್ರಮ ನಿರ್ಮಾಣಗಳನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಸರ್ವೆ ನಂ. 581, 929/2, 726 ಹಾಗೂ 727ರ ಭೂಮಿಗಳಲ್ಲಿ ನಿವೇಶನ ಅಭಿವೃದ್ಧಿಗಾಗಿ ಮುಖ್ಯಮಂತ್ರಿಗಳ ಮೂಲಸೌಕರ್ಯ ಯೋಜನೆಯಡಿ ₹10 ಕೋಟಿ ಅನುದಾನ ಮಂಜೂರಾಗಿದೆ. ಕಾಮಗಾರಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯೂ ಪೂರ್ಣಗೊಂಡಿದೆ. ಆದರೂ ಟೆಂಡರ್ ಪಡೆದ ಗುತ್ತಿಗೆದಾರರು ಇದುವರೆಗೂ ಕಾಮಗಾರಿ ಆರಂಭಿಸದಿರುವುದು ಫಲಾನುಭವಿಗಳಲ್ಲಿ ಅಸಮಾಧಾನ ಮೂಡಿಸಿದೆ ಎಂದು ತಿಳಿಸಿದರು.

ಸರ್ಕಾರದಿಂದ ಅನುದಾನ ಬಿಡುಗಡೆಯಾಗಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ಅಭಿವೃದ್ಧಿ ಕಾಮಗಾರಿ ವಿಳಂಬವಾಗುತ್ತಿರುವುದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು. ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ತಕ್ಷಣ ಕಾಮಗಾರಿ ಆರಂಭಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಕ್ರಮವಾಗಿ ಶೆಡ್‌ಗಳನ್ನು ನಿರ್ಮಿಸಲು ಕಾರಣಕಾರಾದವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ನಿವೇಶನ ರಹಿತರಿಗೆ ಮಂಜೂರಾದ ಭೂಮಿಯನ್ನು ರಕ್ಷಿಸಿ, ಅರ್ಹ ಫಲಾನುಭವಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಅಧ್ಯಕ್ಷ ಜನಾರ್ಧನ ಹಳ್ಳಿಬೆಂಚಿ, ಪ್ರಧಾನ ಕಾರ್ಯದರ್ಶಿ ಬಸವದ ಹೊಸೂರು, ಶಂಕ್ರಮ್ಮ, ಹುಲಿಗೆಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮನ್ಸಲಾಪೂರದಲ್ಲಿ ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರಕ್ಕೆ ಚಾಲನೆ



ರಾಯಚೂರು, ಅ.12: ವಿದ್ಯಾರ್ಥಿಗಳಲ್ಲಿ ಸಮಾಜಸೇವೆಯ ಮನೋಭಾವ, ಶಿಸ್ತು, ನಾಯಕತ್ವ ಗುಣ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಪ್ರಮುಖ ಪಾತ್ರ ವಹಿಸುತ್ತಿದ್ದು, ಯುವಜನರು ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಗಣ್ಯರು ಅಭಿಪ್ರಾಯಪಟ್ಟರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ಲಾರ ಸಿದ್ದಪ್ಪಗೌಡ ಕರೆಡ್ಡಿ ಪದವಿ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸಹಯೋಗದಲ್ಲಿ ಸೋಮವಾರ ಮನ್ಸಲಾಪೂರ ಗ್ರಾಮದಲ್ಲಿ ಆಯೋಜಿಸಿದ್ದ 202526ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಮನ್ಸಲಾಪೂರ ಸಿದ್ದಲಿಂಗೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಸಿದ್ದನಗೌಡ ದೀಪ ಬೆಳಗಿಸುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿದರು. ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಗೌರವಾಧ್ಯಕ್ಷ ಹರವಿ ನಾಗನಗೌಡ ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಉಪಾಧ್ಯಕ್ಷ ಹಾಗೂ ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷ ಅಶೋಕ್ ಪಾಟೀಲ್ ಅತ್ತನೂರು, ಎಚ್‌ಸಿಎಂಎಸ್ ಕೆ ಪದವಿ ಮಹಾವಿದ್ಯಾಲಯದ ಅಧ್ಯಕ್ಷ ಕೆ. ಶರಣರೆಡ್ಡಿ ಪಾಟೀಲ, ಕಾರ್ಯದರ್ಶಿ ಆನಂದ್ ಪಾಟೀಲ್ ಅಸ್ಕಿಹಾಳ್ ಹಾಗೂ ಸದಸ್ಯ ಎಸ್.ಎಲ್. ಕೇಶವ ರೆಡ್ಡಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳು ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕದ ಜ್ಞಾನದ ಜೊತೆಗೆ ಸಮಾಜದ ವಾಸ್ತವ ಪರಿಸ್ಥಿತಿಗಳನ್ನು ತಿಳಿದುಕೊಳ್ಳಲು ಉತ್ತಮ ಅವಕಾಶ ಕಲ್ಪಿಸುತ್ತವೆ ಎಂದು ತಿಳಿಸಿದರು.

ಗ್ರಾಮೀಣ ಜನರ ಜೀವನಶೈಲಿ, ಸಮಸ್ಯೆಗಳು ಹಾಗೂ ಅಗತ್ಯಗಳನ್ನು ನೇರವಾಗಿ ಅರಿತುಕೊಳ್ಳುವ ಮೂಲಕ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಬೆಳೆಯುತ್ತದೆ. ಇಂತಹ ಶಿಬಿರಗಳು ಯುವಜನರಲ್ಲಿ ಪರಸ್ಪರ ಸಹಕಾರ, ಶಿಸ್ತು ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ರಾಯಚೂರು ಎಪಿಎಂಸಿ ಉಪಾಧ್ಯಕ್ಷ ಶಶಿಧರ್ ಪಾಟೀಲ್ ಮೇಟಿ ಹಾಗೂ ಖಾಸಗಿ ಶಾಲೆಗಳ ಒಕ್ಕೂಟದ ಗೌರವಾಧ್ಯಕ್ಷ ಮತ್ತು ಮನ್ಸಲಾಪೂರ ನೇತಾಜಿ ಪ್ರೌಢಶಾಲೆಯ ಕಾರ್ಯದರ್ಶಿ ರವಿಕುಮಾರ ಮಾತನಾಡಿ, ಗ್ರಾಮಗಳ ಅಭಿವೃದ್ಧಿಯಲ್ಲಿ ಯುವಜನರ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದೆ. ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಸಾಮಾಜಿಕ ಚಟುವಟಿಕೆಗಳಲ್ಲಿಯೂ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಪರ್ವತರೆಡ್ಡಿ ಮಾತನಾಡಿ, ಎನ್‌ಎಸ್‌ಎಸ್ ಶಿಬಿರದ ಮೂಲಕ ದೊರೆಯುವ ಅನುಭವ ವಿದ್ಯಾರ್ಥಿಗಳ ಮುಂದಿನ ಜೀವನಕ್ಕೆ ಮಾರ್ಗದರ್ಶಿಯಾಗಬೇಕು. ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ಗುಣವನ್ನು ಬೆಳೆಸಿಕೊಂಡು ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಶರಣ ಭೂಪಾಲ ನಾಡಗೌಡ ಮಾತನಾಡಿ, ವಿದ್ಯಾರ್ಥಿಗಳು ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ವ್ಯಕ್ತಿತ್ವ ವಿಕಸನದ ಜೊತೆಗೆ ಸಮಾಜದ ಅಭಿವೃದ್ಧಿಗೂ ಕೊಡುಗೆ ನೀಡಲು ಸಾಧ್ಯವಾಗುತ್ತದೆ. ರಾಷ್ಟ್ರೀಯ ಸೇವಾ ಯೋಜನೆಯ ಆಶಯಗಳನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮಹಾವಿದ್ಯಾಲಯದ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಶರಣಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ ಶಿಬಿರದ ಉದ್ದೇಶಗಳನ್ನು ವಿವರಿಸಿದರು. ಉಪನ್ಯಾಸಕ ಈರಪ್ಪ ಸರ್ಜಾಪುರ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ರೇಣುಕಾ, ಪದ್ಮ, ದೀಪಾ, ಅನ್ನಪೂರ್ಣ, ಗಂಗಾಧರ, ಅಜೇಯ ಕುಮಾರ ಸೇರಿದಂತೆ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಬೆಳೆ ನಷ್ಟ ಪರಿಹಾರ, ಕೃಷಿ ಸಾಲ ಮನ್ನಾಕ್ಕೆ ಆಗ್ರಹಿಸಿ ರೈತರ ಪ್ರತಿಭಟನೆ



ಮಾನ್ವಿ: ತಾಲೂಕಿನಲ್ಲಿ ಸಮರ್ಪಕ ಮಳೆಯಾಗದೆ ಬರಗಾಲದ ಪರಿಸ್ಥಿತಿ ಎದುರಾಗಿದ್ದು, ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು ಹಾಗೂ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಆಗ್ರಹಿಸಿ ಅಖಿಲ ಭಾರತ ಕಿಸಾನ್ ಸಂಘಟನೆಯ ತಾಲೂಕು ಸಮಿತಿ ವತಿಯಿಂದ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಬಸವ ವೃತ್ತದಿಂದ ತಹಶೀಲ್ದಾರ್ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಸಂಘಟನೆಯ ಪದಾಧಿಕಾರಿಗಳು ಹಾಗೂ ರೈತರು, ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಖಿಲ ಭಾರತ ಕಿಸಾನ್ ಸಂಘಟನೆಯ ರಾಜ್ಯ ಸಂಚಾಲಕ ಬಸಲಿಂಗಪ್ಪ, ಮಾನ್ವಿ ಹಾಗೂ ಸಿರವಾರ ತಾಲೂಕುಗಳಲ್ಲಿ ಸಮರ್ಪಕ ಮಳೆಯಾಗದ ರೈತರ ಬೆಳೆಗಳು ಹಾನಿಗೊಳಗಾಗಿವೆ. ಕೃಷಿಗಾಗಿ ಸಾಲ ಮಾಡಿ ಬಿತ್ತನೆ ಮಾಡಿರುವ ರೈತರು ಬೆಳೆ ನಷ್ಟದಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ತಕ್ಷಣವೇ ಬೆಳೆ ನಷ್ಟದ ಸಮೀಕ್ಷೆ ನಡೆಸಿ ಪರಿಹಾರ ವಿತರಿಸಬೇಕು. ರೈತರ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡುವ ಮೂಲಕ ಸಂಕಷ್ಟದಲ್ಲಿರುವ ಅನ್ನದಾತರಿಗೆ ನೆರವಾಗಬೇಕು ಎಂದು ಒತ್ತಾಯಿಸಿದರು.

ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಕಂತು ಪಾವತಿಸಿರುವ ರೈತರಿಗೆ ವಿಳಂಬವಿಲ್ಲದೆ ವಿಮೆ ಪರಿಹಾರವನ್ನು ನೇರವಾಗಿ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು. ಮಾನ್ವಿ ಮತ್ತು ಸಿರವಾರ ಭಾಗದ ರೈತರ ಜಮೀನುಗಳಿಗೆ ಕಾಲುವೆಗಳ ಮೂಲಕ ಸಮರ್ಪಕವಾಗಿ ನೀರು ಹರಿಸಿ ಬೆಳೆಗಳ ರಕ್ಷಣೆಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬರಗಾಲದಿಂದ ಗ್ರಾಮೀಣ ಪ್ರದೇಶಗಳಲ್ಲಿ ಕೃಷಿ ಕೂಲಿಕಾರರಿಗೆ ಕೆಲಸವಿಲ್ಲದೆ ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಇದನ್ನು ತಡೆಗಟ್ಟಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಿರಂತರವಾಗಿ ಉದ್ಯೋಗ ಒದಗಿಸಬೇಕು. ಗ್ರಾಮೀಣ ಕುಟುಂಬಗಳಿಗೆ ಜೀವನೋಪಾಯದ ಭದ್ರತೆ ಕಲ್ಪಿಸಬೇಕು ಎಂದು ಹೇಳಿದರು.

ಕಂಬಳತ್ತಿ, ಕುರ್ಡಿ, ಚಿಕಲಪರ್ವಿ, ಆಲದಾಳ, ಮುರಾನಪುರ, ಕೆ. ಗುಡದಿನ್ನಿ, ಗಣದಿನ್ನಿ, ಹಳ್ಳಿ ಸೇರಿದಂತೆ ಮಾನ್ವಿ ಹಾಗೂ ಸಿರವಾರ ತಾಲೂಕುಗಳ ವಿವಿಧ ಗ್ರಾಮಗಳಲ್ಲಿ ಸರ್ಕಾರಿ ಭೂಮಿಯನ್ನು ಸಾಗುವಳಿ ಮಾಡುತ್ತಿರುವ ಅರ್ಹ ರೈತರ ಬಗರ್ ಹುಕುಂ ಅರ್ಜಿಗಳನ್ನು ತಿರಸ್ಕರಿಸದೆ, ನಿಯಮಾನುಸಾರ ಭೂಮಿ ಸಕ್ರಮಗೊಳಿಸಬೇಕು ಎಂದು ಒತ್ತಾಯಿಸಿದರು.

ಅಲ್ಲದೆ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳ ಭೂ ಒಡೆತನ ಯೋಜನೆಯಡಿ ಒಪ್ಪಿಗೆ ಪತ್ರ ಪಡೆದ ರೈತರ ಜಮೀನುಗಳ ಖರೀದಿ ಪ್ರಕ್ರಿಯೆಯನ್ನು ತ್ವರಿತಗೊಳಿಸಬೇಕು. ಭೂಹೀನ ಬಡ ಕುಟುಂಬಗಳಿಗೆ ಭೂಮಿ ಹಂಚಿಕೆ ಮಾಡುವ ಮೂಲಕ ಆರ್ಥಿಕ ಸ್ವಾವಲಂಬನೆಗೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ತಾಲೂಕಿನ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದ್ದು, ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಅಗತ್ಯವಿರುವ ಗ್ರಾಮಗಳಲ್ಲಿ ಹೊಸ ಕೊಳವೆಬಾವಿಗಳನ್ನು ಕೊರೆಸಬೇಕು. ನೀರಿನ ಮೂಲಗಳು ಲಭ್ಯವಿಲ್ಲದ ಕಡೆ ಟ್ಯಾಂಕರ್‌ಗಳ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಬೇಕು. ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವಿನ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿದರು.

ಬುರಾನಪುರ ಗ್ರಾಮದ ಸರ್ವೆ ನಂಬರ್ 54ರ ಸರ್ಕಾರಿ ಭೂಮಿಯಲ್ಲಿ ನಿವೇಶನರಹಿತ ಬಡ ಕುಟುಂಬಗಳಿಗೆ ನಿವೇಶನಗಳನ್ನು ಗುರುತಿಸಿ ಹಂಚಿಕೆ ಮಾಡಬೇಕು. ರೈತರು, ಕೃಷಿ ಕೂಲಿಕಾರರು ಹಾಗೂ ಬಡವರ ಸಮಸ್ಯೆಗಳಿಗೆ ಸರ್ಕಾರ ಆದ್ಯತೆ ನೀಡಿ ತಕ್ಷಣ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ಕಿಸಾನ್ ಸಂಘಟನೆಯ ಜಿಲ್ಲಾಧ್ಯಕ್ಷ ವಿ. ಮುದುಕಪ್ಪ ನಾಯಕ, ದೇವಪ್ಪ ಗುಡದಿನ್ನಿ, ರವಿಕುಮಾರ, ಭೀಮರಾಯ, ದಿಲೀಪ್ ಟೈಲರ್, ಯಲ್ಲಪ್ಪ ನಾಯಕ, ನರಸಪ್ಪ, ಮಲ್ಲಪ್ಪಗೌಡ, ಆಂಜಿನಪ್ಪ ಭೋವಿ, ಪ್ರಸಾದ ಕುರ್ಡಿ, ಆಂಜನೇಯ್ಯ ಬಲ್ಲಟ್ಗಿ, ಅಂಬ್ರೇಶಪ್ಪ ಚಿಕಲಪರ್ವಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

# ₹10 ಲಕ್ಷ ವೆಚ್ಚದ ಶ್ರೀದೇವಿ ಪುರಾಣ ಮಂಟಪ ಲೋಕಾರ್ಪಣೆ



ಮಾನ್ವಿ: ತಾಲೂಕಿನ ಹಿರೇಕೊಟ್ನೆಕಲ್ ಗ್ರಾಮದ ಶ್ರೀ ತಾಯಮ್ಮದೇವಿ ದೇವಸ್ಥಾನದಲ್ಲಿ ದಸರಾ ಮಹೋತ್ಸವದ ಅಂಗವಾಗಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ನೆರವೇರಿದವು. ಇದೇ ಸಂದರ್ಭದಲ್ಲಿ ₹10 ಲಕ್ಷ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾದ ಶ್ರೀದೇವಿ ಪುರಾಣ ಮಂಟಪವನ್ನು ಲೋಕಾರ್ಪಣೆಗೊಳಿಸಲಾಯಿತು.

ದಸರಾ ಮಹೋತ್ಸವದ ಪ್ರಯುಕ್ತ ದೇವಸ್ಥಾನದಲ್ಲಿ ತಾಯಮ್ಮದೇವಿಗೆ ರುದ್ರಾಭಿಷೇಕ ಸೇರಿದಂತೆ ವಿಶೇಷ ಪೂಜಾ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಗ್ರಾಮಸ್ಥರು ಹಾಗೂ ಭಕ್ತರು ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ದೇವಸ್ಥಾನದ ಆವರಣದಲ್ಲಿ ನಿರ್ಮಿಸಲಾದ ನೂತನ ಶ್ರೀದೇವಿ ಪುರಾಣ ಮಂಟಪವನ್ನು ನಿರ್ಮಾಣಕ್ಕೆ ದೇಣಿಗೆ ನೀಡಿದ ಹಿರಿಯ ವಕೀಲ ಸಿದ್ದಲಿಂಗಪ್ಪ ಚಿಕ್ಕಕೊಟ್ನೆಕಲ್ ಅವರು ಲೋಕಾರ್ಪಣೆಗೊಳಿಸಿದರು.

ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಪುರಾಣ ಪ್ರವಚನಗಳ ಆಯೋಜನೆಗೆ ಅನುಕೂಲವಾಗುವ ಉದ್ದೇಶದಿಂದ ಈ ಮಂಟಪವನ್ನು ನಿರ್ಮಿಸಲಾಗಿದ್ದು, ಗ್ರಾಮದ ಧಾರ್ಮಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಪೂರಕವಾಗಲಿದೆ.

ಈ ಸಂದರ್ಭದಲ್ಲಿ ಶ್ರೀ ತಾಯಮ್ಮದೇವಿ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು, ಗ್ರಾಮದ ಹಿರಿಯರು, ಗ್ರಾಮಸ್ಥರು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ಭಕ್ತಿಭಾವದಿಂದ ಸೂರ್ಯವಾಹನ ಉತ್ಸವ



ರಾಯಚೂರು, ಅ.12: ಶರನ್ನವರಾತ್ರಿ ಉತ್ಸವದ ಅಂಗವಾಗಿ ನಗರದ ಆರ್ಯವೈಶ್ಯ ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ಭಾನುವಾರ ಶ್ರೀದೇವಿ ಭೂದೇವಿ ಸಮೇತ ಶ್ರೀ ವೆಂಕಟೇಶ್ವರ ಸ್ವಾಮಿಯ ಸೂರ್ಯವಾಹನ ಉತ್ಸವವು ಭಜನೆ, ಕೋಲಾಟ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಶ್ರದ್ಧಾಭಕ್ತಿಯಿಂದ ನೆರವೇರಿತು.

ಶರನ್ನವರಾತ್ರಿ ಮಹೋತ್ಸವದ ಪ್ರಯುಕ್ತ ದೇವಸ್ಥಾನದಲ್ಲಿ ಬೆಳಗ್ಗೆಯಿಂದಲೇ ವಿಶೇಷ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು. ಮುಂಜಾನೆ ಗೋಪೂಜೆ ನೆರವೇರಿಸಿದ ಬಳಿಕ ದೇವರಿಗೆ ವಿಶೇಷ ಅಭಿಷೇಕ, ಅರ್ಚನೆ ಹಾಗೂ ಮಹಾಮಂಗಳಾರತಿ ಸಲ್ಲಿಸಲಾಯಿತು. ದೇವರ ಮೂರ್ತಿಯನ್ನು ವಿವಿಧ ಬಗೆಯ ಪುಷ್ಪಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ದೇವಸ್ಥಾನದ ಆವರಣವನ್ನು ಹೂವು ಹಾಗೂ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿದ್ದು, ಭಕ್ತರಿಗೆ ಹಬ್ಬದ ಸಂಭ್ರಮವನ್ನುಂಟು ಮಾಡಿತು.

ಸಂಜೆ ದೇವಸ್ಥಾನದ ಆವರಣದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮಹಿಳೆಯರು ಹಾಗೂ ಭಕ್ತರು ಭಜನೆ, ಕೋಲಾಟ ಸೇರಿದಂತೆ ಸಾಂಪ್ರದಾಯಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಉತ್ಸವಕ್ಕೆ ವಿಶೇಷ ಮೆರುಗು ನೀಡಿದರು. ಭಕ್ತಿಗೀತೆಗಳು ಹಾಗೂ ದೇವರ ನಾಮಸ್ಮರಣೆಯಿಂದ ದೇವಸ್ಥಾನದ ಆವರಣದಲ್ಲಿ ಧಾರ್ಮಿಕ ವಾತಾವರಣ ನಿರ್ಮಾಣವಾಗಿತ್ತು.

ಬಳಿಕ ಶ್ರೀದೇವಿ ಭೂದೇವಿ ಸಮೇತ ಶ್ರೀ ವೆಂಕಟೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಿದ ಸೂರ್ಯವಾಹನದಲ್ಲಿ ಪ್ರತಿಷ್ಠಾಪಿಸಿ ಉತ್ಸವ ನೆರವೇರಿಸಲಾಯಿತು. ಭಕ್ತರು ಭಜನೆ ಹಾಗೂ ಕೋಲಾಟದೊಂದಿಗೆ ಉತ್ಸವದಲ್ಲಿ ಪಾಲ್ಗೊಂಡು ದೇವರಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿದರು. ಮಹಿಳೆಯರು ಸಾಂಪ್ರದಾಯಿಕ ಉಡುಗೆ ತೊಟ್ಟು ಉತ್ಸವದಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು.

ಶರನ್ನವರಾತ್ರಿ ಅಂಗವಾಗಿ ನಡೆದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಭಕ್ತರಲ್ಲಿ ಸಂಭ್ರಮ ಮೂಡಿಸಿದವು. ದೇವಸ್ಥಾನಕ್ಕೆ ಆಗಮಿಸಿದ ಭಕ್ತರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಉತ್ಸವದ ಯಶಸ್ವಿಗೆ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಹಾಗೂ ಭಕ್ತರು ಸಹಕರಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷ ಸಾವಿತ್ರಿ ಪುರುಷೋತ್ತಮ, ಕಾರ್ಯದರ್ಶಿ ಸಿ. ಪದ್ಮರಾಜ್ ಸೇರಿದಂತೆ ಸಮಿತಿಯ ಇತರ ಪದಾಧಿಕಾರಿಗಳು, ಆರ್ಯವೈಶ್ಯ ಸಮಾಜದ ಮುಖಂಡರು, ಮಹಿಳೆಯರು ಹಾಗೂ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದರು.

# ಗಾಣದಾಳ, ಸೋಮನಮರಡಿ ಗ್ರಾಪಂಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಲು ಆಗ್ರಹಿಸಿ ಬೃಹತ್ ಪ್ರತಿಭಟನೆ





ಜಾಲಹಳ್ಳಿ, ಅ.12: ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿಸಿರುವ ಗಾಣದಾಳ ಹಾಗೂ ಸೋಮನಮರಡಿ ಗ್ರಾಮ ಪಂಚಾಯಿತಿಗಳನ್ನು ಪುನಃ ದೇವದುರ್ಗ ತಾಲೂಕು ವ್ಯಾಪ್ತಿಗೆ ಸೇರಿಸಬೇಕು ಎಂದು ಆಗ್ರಹಿಸಿ ಎರಡೂ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಸಾವಿರಾರು ಗ್ರಾಮಸ್ಥರು ಸೋಮವಾರ ಜಾಲಹಳ್ಳಿಯ ನಾಡಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದರು.

ಅರಕೇರಾ ತಾಲೂಕು ರಚನೆಯ ಸಂದರ್ಭದಲ್ಲಿ ಭೌಗೋಳಿಕ ಹಾಗೂ ಸಾರ್ವಜನಿಕರ ಅನುಕೂಲಗಳನ್ನು ಸಮರ್ಪಕವಾಗಿ ಪರಿಗಣಿಸದೆ ಗಾಣದಾಳ ಮತ್ತು ಸೋಮನಮರಡಿ ಗ್ರಾಮ ಪಂಚಾಯಿತಿಗಳನ್ನು ಹೊಸ ತಾಲೂಕಿಗೆ ಸೇರಿಸಲಾಗಿದೆ. ಇದರಿಂದ ಶಿಕ್ಷಣ, ಆರೋಗ್ಯ, ಸಾರಿಗೆ, ವ್ಯಾಪಾರ ಹಾಗೂ ಸರ್ಕಾರಿ ಕಚೇರಿಗಳ ಕೆಲಸಗಳಿಗೆ ಸಾರ್ವಜನಿಕರು ಅನಗತ್ಯವಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಗಾಣದಾಳ, ಕಕ್ಕಲದೊಡ್ಡಿ, ಸೋಮನಮರಡಿ, ಬೋಗಿರಾಮನಗುಂಡ, ಸಂಪತ್ರಾಯನದೊಡ್ಡಿ, ಮಯಕಲದೊಡ್ಡಿ, ಕಮಲದಿನ್ನಿ ಸೇರಿದಂತೆ ವಿವಿಧ ಗ್ರಾಮಗಳಿಂದ ಮಹಿಳೆಯರು, ಯುವಕರು ಹಾಗೂ ಹಿರಿಯ ನಾಗರಿಕರು ಪ್ರತ್ಯೇಕ ಮಾರ್ಗಗಳಲ್ಲಿ ಪಾದಯಾತ್ರೆ ನಡೆಸಿ ಜಾಲಹಳ್ಳಿಗೆ ಆಗಮಿಸಿದರು. ನಾಡಕಚೇರಿ ಎದುರು ಜಮಾಯಿಸಿದ ಗ್ರಾಮಸ್ಥರು ತಮ್ಮ ಬೇಡಿಕೆ ಈಡೇರಿಸುವಂತೆ ಘೋಷಣೆಗಳನ್ನು ಕೂಗಿ ಸರ್ಕಾರದ ಗಮನ ಸೆಳೆದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ವಕೀಲ ಬಸವರಾಜ್ ಗಾಣದಾಳ, ಜಾಲಹಳ್ಳಿ ಪಟ್ಟಣದಲ್ಲಿ ಸಮುದಾಯ ಆರೋಗ್ಯ ಕೇಂದ್ರ, ನಾಡಕಚೇರಿ, ಪೊಲೀಸ್ ಠಾಣೆ, ಪಶುಚಿಕಿತ್ಸಾಲಯ, ಕೃಷಿ ಕೇಂದ್ರ, ಅಂಚೆ ಕಚೇರಿ, 33 ಕೆ.ವಿ. ವಿದ್ಯುತ್ ಕೇಂದ್ರ ಹಾಗೂ ಬ್ಯಾಂಕ್‌ಗಳು ಸೇರಿದಂತೆ ಸಾರ್ವಜನಿಕರಿಗೆ ಅಗತ್ಯವಾದ ಸೌಲಭ್ಯಗಳಿವೆ. ರಾಜ್ಯ ಹೆದ್ದಾರಿ ಸಂಖ್ಯೆ 61 ಜಾಲಹಳ್ಳಿ ಮೂಲಕ ಹಾದುಹೋಗುವುದರಿಂದ ರಾಯಚೂರು ಜಿಲ್ಲಾ ಕೇಂದ್ರ ಸೇರಿದಂತೆ ವಿವಿಧ ಪಟ್ಟಣಗಳಿಗೆ ಸುಗಮ ಸಾರಿಗೆ ಸಂಪರ್ಕವಿದೆ ಎಂದು ವಿವರಿಸಿದರು.

ಗಾಣದಾಳ ಮತ್ತು ಸೋಮನಮರಡಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಜನರು ಹಲವು ವರ್ಷಗಳಿಂದ ಜಾಲಹಳ್ಳಿಯನ್ನೇ ತಮ್ಮ ಪ್ರಮುಖ ವ್ಯಾಪಾರ ಹಾಗೂ ಆಡಳಿತಾತ್ಮಕ ಕೇಂದ್ರವನ್ನಾಗಿ ಅವಲಂಬಿಸಿದ್ದಾರೆ. ಆದ್ದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಎರಡೂ ಗ್ರಾಮ ಪಂಚಾಯಿತಿಗಳನ್ನು ದೇವದುರ್ಗ ತಾಲೂಕು ಹಾಗೂ ಜಾಲಹಳ್ಳಿ ಹೋಬಳಿಗೆ ಮರುಸೇರ್ಪಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ಮುಖಂಡ ಸಾಬಣ್ಣ ಕಮ್ಮಾಲದಿನ್ನಿ ಮಾತನಾಡಿ, ಅರಕೇರಾ ತಾಲೂಕಿಗೆ ಸೇರ್ಪಡೆಯಾದ ನಂತರ ಜನರು ವಿವಿಧ ಸರ್ಕಾರಿ ಕೆಲಸಗಳಿಗಾಗಿ ತೊಂದರೆ ಅನುಭವಿಸುತ್ತಿದ್ದಾರೆ. ಗ್ರಾಮಗಳ ಭೌಗೋಳಿಕ ಸ್ಥಿತಿ, ಸಾರಿಗೆ ಸಂಪರ್ಕ ಹಾಗೂ ಸಾರ್ವಜನಿಕರ ಅಭಿಪ್ರಾಯಗಳನ್ನು ಪರಿಗಣಿಸದೆ ಆಡಳಿತಾತ್ಮಕ ಗಡಿಗಳನ್ನು ನಿರ್ಧರಿಸುವುದು ಸರಿಯಲ್ಲ. ಸಂಬಂಧಪಟ್ಟ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಜನರ ಅಭಿಪ್ರಾಯ ಸಂಗ್ರಹಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 4(2)(ಎ) ಹಾಗೂ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಸಂಬಂಧಿತ ಕಾನೂನುಗಳಡಿ ಗ್ರಾಮ ಪಂಚಾಯಿತಿಗಳ ಆಡಳಿತಾತ್ಮಕ ವ್ಯಾಪ್ತಿಯನ್ನು ಮರುಪರಿಶೀಲಿಸುವಂತೆ ಗ್ರಾಮಸ್ಥರು ಮನವಿ ಮಾಡಿದರು.

2025ರ ಅಕ್ಟೋಬರ್ 18ರಂದು ಜಿಲ್ಲಾಧಿಕಾರಿಗಳ ಕಚೇರಿಯಿಂದ ದೇವದುರ್ಗ ಹಾಗೂ ಅರಕೇರಾ ತಹಸೀಲ್ದಾರ್‌ಗಳಿಗೆ ಈ ಕುರಿತು ಪರಿಶೀಲನೆ ನಡೆಸುವಂತೆ ಸೂಚನೆ ನೀಡಲಾಗಿದ್ದರೂ, ಇದುವರೆಗೆ ಯಾವುದೇ ಸಮರ್ಪಕ ಕ್ರಮ ಕೈಗೊಂಡಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಸ್ಥಳಕ್ಕೆ ಆಗಮಿಸಿದ ಎರಡೂ ತಾಲೂಕುಗಳ ತಹಸೀಲ್ದಾರ್ ಕಚೇರಿಯ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.



ಪ್ರತಿಭಟನೆಯಲ್ಲಿ ಮಾತನಾಡಿದ ಶಿವನಗೌಡ ದೇಸಾಯಿ, ಗಾಣದಾಳ ಮತ್ತು ಸೋಮನಮರಡಿ ಗ್ರಾಮ ಪಂಚಾಯಿತಿಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸುವ ಬೇಡಿಕೆಯನ್ನು ಸರ್ಕಾರ ನಿರ್ಲಕ್ಷಿಸಿದರೆ ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ಬಹಿಷ್ಕರಿಸುವುದಾಗಿ ಎಚ್ಚರಿಕೆ ನೀಡಿದರು.

ಮುಖಂಡ ನರಸಣ್ಣ ನಾಯಕ ಮಾತನಾಡಿ, ಹಿಂದಿನ ಜನಪ್ರತಿನಿಧಿಗಳ ಆಡಳಿತ ವೈಖರಿಯನ್ನು ಟೀಕಿಸಿದರು. ಆಲ್ಕೋಡ್ ಹನುಮಂತಪ್ಪ ಅವರನ್ನು ಹೊರತುಪಡಿಸಿದರೆ ಸಾರ್ವಜನಿಕರ ಆರೋಗ್ಯ, ಶಿಕ್ಷಣ ಹಾಗೂ ಅಭಿವೃದ್ಧಿಗೆ ಆದ್ಯತೆ ನೀಡಿದವರು ವಿರಳ ಎಂದು ಅಭಿಪ್ರಾಯಪಟ್ಟ ಅವರು, ಬಹುತೇಕರು ವೈಯಕ್ತಿಕ ಹಿತಾಸಕ್ತಿಗೆ ಹೆಚ್ಚಿನ ಮಹತ್ವ ನೀಡಿದ್ದಾರೆ ಎಂದು ಆರೋಪಿಸಿದರು.

ಅರಕೇರಾವನ್ನು ತಾಲೂಕು ಕೇಂದ್ರವನ್ನಾಗಿ ಮಾಡುವ ಬದಲು ಜಾಲಹಳ್ಳಿ ಹಾಗೂ ಗಬ್ಬೂರನ್ನು ತಾಲೂಕು ಕೇಂದ್ರಗಳನ್ನಾಗಿ ಪರಿಗಣಿಸಬೇಕಿತ್ತು. ಆದರೆ ರಾಜಕೀಯ ಹಾಗೂ ವೈಯಕ್ತಿಕ ಹಿತಾಸಕ್ತಿಗಳ ಕಾರಣದಿಂದ ದೂರದ ಗ್ರಾಮಗಳನ್ನು ಅರಕೇರಾ ತಾಲೂಕಿಗೆ ಸೇರಿಸಲಾಗಿದೆ ಎಂದು ಆರೋಪಿಸಿದ ಅವರು, ಮಾಜಿ ಸಚಿವ ಕೆ. ಶಿವನಗೌಡ ನಾಯಕ ಅವರ ವಿರುದ್ಧವೂ ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಬುಡ್ಡನಗೌಡ ಜಾಗಟಗಲ್, ವಕೀಲ ಬಸನಗೌಡ ದೇಸಾಯಿ, ಸಿದ್ದನಗೌಡ ಮೂಡಲಗುಂಡ, ವಕೀಲ ವಸಂತಕುಮಾ್ರ, ಹನುಮಂತ ಕಾಕರಗಲ್, ಶಿವರಾಜ್ ನಾಯಕ, ಗಿರಿಯಪ್ಪ ಪೂಜಾರಿ, ಮೌನೇಶ ಗಾಣದಾಳ ಹಾಗೂ ಶಿವಪ್ಪ ಪಲಕನಮರಡಿ ಮಾತನಾಡಿ ಗ್ರಾಮಸ್ಥರ ಬೇಡಿಕೆಗೆ ಬೆಂಬಲ ವ್ಯಕ್ತಪಡಿಸಿದರು.

ಗ್ರಾಮಸ್ಥರ ಸಮಸ್ಯೆಗಳನ್ನು ಮೇಲಧಿಕಾರಿಗಳ ಗಮನಕ್ಕೆ ತಂದು ಶೀಘ್ರ ಕ್ರಮ ಕೈಗೊಳ್ಳುವ ಭರವಸೆಯನ್ನು ಅಧಿಕಾರಿಗಳು ನೀಡಿದ ಬಳಿಕ ಪ್ರತಿಭಟನಾಕಾರರು ಮನವಿ ಸಲ್ಲಿಸಿ ಪ್ರತಿಭಟನೆಯನ್ನು ಮುಕ್ತಾಯಗೊಳಿಸಿದರು.

ಈ ಸಂದರ್ಭದಲ್ಲಿ ರಂಗಣ್ಣ ಕೊರ್ಲ್ಕ್ರ ಶಿವರಾಜ್ ನಾಯಕ ಕೊತ್ತದೊಡ್ಡಿ, ಬಸವರಾಜ್ ಪಂಪಾಪತಿ, ಅಮರೇಗೌಡ ಕಮ್ಮಾಲದಿನ್ನಿ, ಶರಣಗೌಡ ಕಮ್ಮಾಲದಿನ್ನಿ, ವೆಂಕಟರೆಡ್ಡಿ ಕಕ್ಕಲದೊಡ್ಡಿ, ಸಾಬಣ್ಣ ಹೂಗಾ್ರ, ಅಯ್ಯನಗೌಡ ಮಾಸ್ತಿ, ಶಿವು ಪಾಟೀಲ್, ನಾಗರಾಜ್, ಅಬ್ರಹಾಂ ಕಮ್ಮಾಲದಿನ್ನಿ, ಹನುಮಂತ ಸೋಮನಮರಡಿ, ಎಂ.ಆರ್. ಬಸವ ಸೇರಿದಂತೆ ವಿವಿಧ ಗ್ರಾಮಗಳ ಮುಖಂಡರು, ಮಹಿಳೆಯರು ಹಾಗೂ ಸಾವಿರಾರು ಗ್ರಾಮಸ್ಥರು ಭಾಗವಹಿಸಿದ್ದರು.

## ಎಸ್‌ಐಆರ್ ರದ್ದತಿಗೆ ಆಗ್ರಹಿಸಿ ಸಿಪಿಐ(ಎಂಎಲ್) ಲಿಬರೇಶನ್‌ನಿಂದ ಜೈಲ್ ಭರೋ ಚಳವಳಿ




ರಾಯಚೂರು, ಅ.12: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಹಾಗೂ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆ) ್ರ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿ ಸಿಪಿಐ(ಎಂಎಲ್) ಲಿಬರೇಶನ್ ಪಕ್ಷದ ಕಾರ್ಯಕರ್ತರು ನಗರದ ಟಿಪ್ಪು ಸುಲ್ತಾನ್ ಉದ್ಯಾನವನದ ಬಳಿ ಜೈಲ್ ಭರೋ ಚಳವಳಿ ನಡೆಸಿದರು.

ಪ್ರಜಾಪ್ರಭುತ್ವದ ಮೂಲಾಧಾರವಾಗಿರುವ ಮತದಾನದ ಹಕ್ಕನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಹಕ್ಕಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ನೆಪದಲ್ಲಿ ಅರ್ಹ ಮತದಾರರನ್ನು ಪಟ್ಟಿಯಿಂದ ಕೈಬಿಡುವ ಪ್ರಯತ್ನ ನಡೆಯುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ತಾಲೂಕು ಕಾರ್ಯದರ್ಶಿ ಅಜೀಜ್ ಜಾಗೀರ್ದಾ್ರ, ಮತದಾರರ ಹೆಸರುಗಳನ್ನು ತೆಗೆದುಹಾಕುವುದು, ಮರುಸೇರ್ಪಡೆಗೆ ಅಡೆತಡೆ ಉಂಟುಮಾಡುವುದು ಹಾಗೂ ಆಕ್ಷೇಪಣೆ ಸಲ್ಲಿಸುವ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇದರಿಂದ ಸಾಮಾನ್ಯ ಜನರ ಪ್ರಜಾಸತ್ತಾತ್ಮಕ ಹಕ್ಕುಗಳಿಗೆ ಧಕ್ಕೆಯಾಗುವ ಸಾಧ್ಯತೆಯಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದಲಿತರು, ಅಲ್ಪಸಂಖ್ಯಾತರು, ಮಹಿಳೆಯರು, ವಲಸೆ ಕಾರ್ಮಿಕರು ಸೇರಿದಂತೆ ಸಮಾಜದ ದುರ್ಬಲ ವರ್ಗದ ಜನರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಚುನಾವಣಾ ಆಯೋಗ ಎಚ್ಚರಿಕೆ ವಹಿಸಬೇಕು. ಕರ್ನಾಟಕದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ, 2025ರ ಜನವರಿಯಲ್ಲಿದ್ದ ಮತದಾರರ ಪಟ್ಟಿಗಳನ್ನು ಮರುಸ್ಥಾಪಿಸಬೇಕು. ಪಟ್ಟಿಯಿಂದ ಕೈಬಿಡಲಾದ ಅರ್ಹ ಮತದಾರರ ಹೆಸರುಗಳನ್ನು ಮರುಸೇರ್ಪಡೆಗೊಳಿಸಬೇಕು ಎಂದು ಆಗ್ರಹಿಸಿದರು.

ಚುನಾವಣಾ ಆಯೋಗವು ರಾಜಕೀಯ ಪ್ರಭಾವಕ್ಕೆ ಒಳಗಾಗದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸಬೇಕು. ಮತದಾರರ ಪಟ್ಟಿಗಳ ಪರಿಷ್ಕರಣೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಕಾಪಾಡಬೇಕು. ಮತದಾನದ ಹಕ್ಕಿನ ರಕ್ಷಣೆಗೆ ಸಾರ್ವಜನಿಕರು ಸಂಘಟಿತ ಹೋರಾಟ ನಡೆಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಕಾರ್ಯದರ್ಶಿ ನಾಗರಾಜ್ ಪೂಜಾ್ರ, ಮುಖಂಡರಾದ ಜಿಲಾನಿ ಯರಗೇರಾ, ಆರ್. ಎಚ್. ಕಲ್ಮಗಿ, ಬಸವರಾಜ್ ಬೆಳಮುಗಿ, ಭೀಮಯ್ಯ, ಜಗದೀಶ್, ಹನೀಫ್ ಅಬಕಾರಿ, ಖಾದ್ರ್ ವೀರೇಶ್, ಜೋಳಯ್ಯ, ನರಸಪ್ಪ, ಈರಣ್ಣ, ಯಲ್ಲಪ್ಪ, ಮಹೇಂದ್ರ, ಹನುಮಂತ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮಾಸಿಕ ₹15 ಸಾವಿರ ಗೌರವಧನಕ್ಕೆ ಆಗ್ರಹಿಸಿ ಆಶಾ ಕಾರ್ಯಕರ್ತೆಯರ ಪ್ರತಿಭಟನೆ




ರಾಯಚೂರು, ಅ.12: ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡುವ ಗೌರವಧನ ಹಾಗೂ ಪ್ರೋತ್ಸಾಹಧನ ಸೇರಿ ಆಶಾ ಕಾರ್ಯಕರ್ತೆಯರಿಗೆ ಮಾಸಿಕ ₹15 ಸಾವಿರ ನಿಗದಿಪಡಿಸಬೇಕು. ಬಾಕಿ ಇರುವ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ (ಎಐಯುಟಿಯುಸಿ) ಜಿಲ್ಲಾ ಸಮಿತಿ ನೇತೃತ್ವದಲ್ಲಿ ಸೋಮವಾರ ನಗರದ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಸಂಘದ ಮುಖಂಡರು, ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಾರ್ವಜನಿಕ ಆರೋಗ್ಯ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವಲ್ಲಿ ಆಶಾ ಕಾರ್ಯಕರ್ತೆಯರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಆದರೆ, ಅವರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯುತ್ತಿಲ್ಲ. ದಿನಬಳಕೆಯ ವಸ್ತುಗಳ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದ್ದರೂ ಕಳೆದ ಒಂಬತ್ತು ವರ್ಷಗಳಲ್ಲಿ ಗೌರವಧನ ಕೇವಲ ₹1,500 ಹೆಚ್ಚಿಸಲಾಗಿದೆ. ಇದರಿಂದ ಕುಟುಂಬ ನಿರ್ವಹಣೆ ಕಷ್ಟವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ ಒಂದು ವರ್ಷದಿಂದ ಗೌರವಧನ ಹಾಗೂ ಪ್ರೋತ್ಸಾಹಧನ ಪಾವತಿಯಲ್ಲಿ ನಿರಂತರ ವಿಳಂಬವಾಗುತ್ತಿದೆ. ಹಲವು ತಿಂಗಳ ಬಾಕಿ ಹಣ ಬಿಡುಗಡೆಯಾಗದ ಕಾರಣ ಕಾರ್ಯಕರ್ತೆಯರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ನೀಡಿರುವ ಭರವಸೆಗಳನ್ನು ವಿಳಂಬ ಮಾಡದೆ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಆರೋಗ್ಯ ಇಲಾಖೆಯ ಸಮಸ್ತ ಆ್ಯಪ್‌ನಲ್ಲಿ ಕೆಲಸ ನಿರ್ವಹಿಸುವುದನ್ನು ಕಡ್ಡಾಯಗೊಳಿಸುವ ಮೊದಲು ಗುಣಮಟ್ಟದ ಮೊಬೈಲ್ ಅಥವಾ ಟ್ಯಾಬ್ಲೆಟ್‌ಗಳನ್ನು ಉಚಿತವಾಗಿ ಒದಗಿಸಬೇಕು. ಎನ್‌ಎಚ್‌ಎಂ ಮಾರ್ಗಸೂಚಿಗಳಲ್ಲಿ ಇಲ್ಲದ ನಿಕ್ಷಯ್ ಆ್ಯಪ್ ಕೆಲಸ ಹಾಗೂ ಕಫದ ಮಾದರಿ ಸಂಗ್ರಹಿಸಿ ತರುವಂತೆ ಒತ್ತಡ ಹೇರುವುದನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಇಲಾಖೆಯ ಆದೇಶದಂತೆ ಮಾಸಿಕ ₹5 ಸಾವಿರ ಗೌರವಧನ, ₹2 ಸಾವಿರ ಪ್ರೋತ್ಸಾಹಧನ ಹಾಗೂ ₹1 ಸಾವಿರ ಟಿಬಿಐ ಮೊತ್ತವನ್ನು ಕಡಿತವಿಲ್ಲದೆ ಪಾವತಿಸಬೇಕು. ಪ್ರತಿ ತಿಂಗಳ ಪಾವತಿ ವಿವರಗಳನ್ನು ಒದಗಿಸುವುದರ ಜೊತೆಗೆ ಕಳೆದ ಒಂದು ವರ್ಷದ ಸಂಪೂರ್ಣ ಲೆಕ್ಕಪತ್ರಗಳನ್ನು ಸಂಘಕ್ಕೆ ನೀಡಬೇಕು. ಹತ್ತು ವರ್ಷ ಸೇವೆ ಸಲ್ಲಿಸಿ ನಿವೃತ್ತರಾದ ಅಥವಾ ಕೆಲಸ ತೊರೆದ ಕಾರ್ಯಕರ್ತೆಯರಿಗೆ ಇಡಿಗಂಟು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗಳ ಈಡೇರಿಕೆಗೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ, ಆರೋಗ್ಯ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಸಂಘದ ಗೌರವಾಧ್ಯಕ್ಷೆ ಗೌರಮ್ಮ ಹೊಸಮನಿ, ಅಧ್ಯಕ್ಷೆ ಶೋಭಾ, ಮಹೇಶ್, ಅಣ್ಣಪ್ಪ ಶಿರಸ್ಯಾಡ್, ಈರಮ್ಮ ದೇವದುರ್ಗ, ಪ್ರಭಾವತಿ, ಮಲ್ಲಮ್ಮ, ಲವನಾ, ದೇವಮ್ಮ ಮಸ್ಕಿ, ಸುಜಾತಾ, ಭೀಮಮ್ಮ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ವಿಬಿಜಿರಾಮ್ ಜಿ ಯೋಜನೆಯಡಿ 21.61 ಲಕ್ಷ ಮಾನವ ದಿನಗಳ ಸೃಜನೆ

ರಾಯಚೂರು ಅ. 12 (ಕರ್ನಾಟಕ ವಾರ್ತೆ): ಗ್ರಾಮೀಣ ಪ್ರದೇಶದ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗಾವಕಾಶಗಳನ್ನು ಕಲ್ಪಿಸಿ, ಅವರ ಜೀವನೋಪಾಯವನ್ನು ಸುಧಾರಿಸುವ ಹಾಗೂ ಉದ್ಯೋಗ ಅರಸಿ ವಲಸೆ ಹೋಗುವುದನ್ನು ತಡೆಯುವ ಉದ್ದೇಶದಿಂದ ರಾಯಚೂರು ಜಿಲ್ಲಾ ಪಂಚಾಯತಿಯು ವಿವಿಧ ವಿನೂತನ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಚಟುವಟಿಕೆಗಳ ಮೂಲಕ ಜಾಗೃತಿ ಅಭಿಯಾನವನ್ನು ಹಮ್ಮಿಕೊಂಡಿದೆ.

ವಿಕಸಿತ ಭಾರತಜಿ ರಾಮ್ ಜಿ 125 ದಿನಗಳ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಜಿಲ್ಲೆಯ 179 ಗ್ರಾಮ ಪಂಚಾಯಿತಿಗಳಲ್ಲಿ ಜುಲೈ 1ರಿಂದ ವಿಕಸಿತ ಗ್ರಾಮ ಪಂಚಾಯತಿಯಿದ ವಿಕಸಿತ ಭಾರತದೆಡೆಗೆ ಎಂಬ ಅಭಿಯಾನವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಬರಗಾಲದ ಸಂದರ್ಭದಲ್ಲಿ ಗ್ರಾಮೀಣ ಕುಟುಂಬಗಳ ಜೀವನೋಪಾಯಕ್ಕೆ ಆಸರೆಯಾಗುವಂತೆ ಸ್ಥಳೀಯವಾಗಿ ಅಕುಶಲ ಉದ್ಯೋಗವನ್ನು ಒದಗಿಸುವುದು, ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವುದು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಿರಂತರ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಈ ಅಭಿಯಾನದ ಪ್ರಮುಖ ಉದ್ದೇಶಗಳಾಗಿವೆ.

ಉದ್ಯೋಗ ಖಾತ್ರಿಯೊಂದಿಗೆ ವಲಸೆ ತಡೆಗೆ ಆದ್ಯತೆ ವಿಬಿಜಿರಾಮ್ ಜಿ ಯೋಜನೆಯಡಿ ಗ್ರಾಮೀಣ ಕುಟುಂಬಗಳಿಗೆ ಉದ್ಯೋಗಾವಕಾಶಗಳನ್ನು ಒದಗಿಸುವುದರ ಜೊತೆಗೆ ಸಮಾನ ಕೂಲಿ, ಜಲಸಂರಕ್ಷಣೆ, ಗ್ರಾಮೀಣ ಮೂಲಸೌಕರ್ಯಗಳ ಅಭಿವೃದ್ಧಿ ಮತ್ತು ಜೀವನೋಪಾಯದ ಅವಕಾಶಗಳ ವಿಸ್ತರಣೆಗೆ ಆದ್ಯತೆ ನೀಡಲಾಗುತ್ತಿದೆ.

ಅಭಿಯಾನದಡಿ 125 ದಿನಗಳ ಖಾತರಿಪಡಿಸಿದ ಉದ್ಯೋಗ, ಗಂಡು-ಹೆಣ್ಣಿಗೆ ಸಮಾನ ಅವಕಾಶ, ಸಮಾನ ಕೂಲಿ, ವಲಸೆಯ ಯೋಚನೆ ಯಾಕೆ? ವಿಬಿಜಿರಾಮ್ ಜಿ ಯೋಜನೆಯಡಿ ಸ್ಥಳೀಯವಾಗಿಯೇ ಉದ್ಯೋಗ ಖಾತ್ರಿ!, ಕೆಲಸವೂ ಇಲ್ಲೇ, ಕೂಲಿಯೂ ಇಲ್ಲೇ; ಸಂತೋಷದಿದ ನೆಲೆಸೋಣ ನಮ್ಮೂರಲ್ಲೇ!, ಗ್ರಾಮೀಣ ಆರ್ಥಿಕತೆಯ ಸಬಲೀಕರಣಕ್ಕೆ ಒತ್ತು ಎಂಬ ಸಂದೇಶದೊದಿಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿ ಹಾಗೂ ಜನರ ಜೀವನಮಟ್ಟ ಸುಧಾರಿಸುವ ಸಲುವಾಗಿ ಜಲಸಂರಕ್ಷಣೆ ಹಾಗೂ ಜಲಸಂಬಧಿತ ಕಾಮಗಾರಿಗಳಿಗೆ ಉತ್ತೇಜನ, ಗ್ರಾಮೀಣ ಜೀವನೋಪಾಯದ ಅವಕಾಶಗಳ ವಿಸ್ತರಣೆ, ಗ್ರಾಮೀಣ ಮೂಲಸೌಕರ್ಯಗಳ ಬಲವರ್ಧನೆ ಹಾಗೂ ಗ್ರಾಮೀಣ ಜನರ ಕೌಶಲ್ಯ ಮತ್ತು ಸಾಮರ್ಥ್ಯ ವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ.

ಯೋಜನೆಯಡಿ ಜಲಸಂರಕ್ಷಣೆ, ಅಂತರ್ಜಲ ಮರುಪೂರಣ, ಜಲಾನಯನ ಪ್ರದೇಶಗಳ ಅಭಿವೃದ್ಧಿ, ನೀರಾವರಿ ಸೌಲಭ್ಯಗಳ ವೃದ್ಧಿ, ಜಲಮೂಲಗಳ ಪುನಶ್ಚೇತನ ಹಾಗೂ ಅರಣ್ಯೀಕರಣದಂತಹ ಕಾಮಗಾರಿಗಳಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ.



202627ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಒಟ್ಟು 17,376 ಕಾಮಗಾರಿಗಳನ್ನುಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದೆ. ಅವುಗಳಲ್ಲಿ ಜಲ ಭದ್ರತೆಗೆ ಸಂಬಧಿಸಿದ ಕಾಮಗಾರಿಗಳು 6,356, ಗ್ರಾಮೀಣ ಮೂಲಸೌಕರ್ಯಗಳಿಗೆ ಸಂಬಧಿಸಿದ ಕಾಮಗಾರಿಗಳು 5,011, ಗ್ರಾಮೀಣ ಜೀವನೋಪಾಯಕ್ಕೆ ಸಂಬಧಿಸಿದ ಕಾಮಗಾರಿಗಳು 6,004 ಹಾಗೂ ವಿಪತ್ತು ನಿರ್ವಹಣೆಗೆ ಸಂಬಧಿಸಿದ ಕಾಮಗಾರಿಗಳು 5 ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿದೆ.

ಮಾನವ ದಿನಗಳ ಸೃಜನೆಯಲ್ಲಿ ರಾಜ್ಯಕ್ಕೆ ಪ್ರಥಮ: 202627ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ವಿಬಿಜಿ ರಾಮ್ ಜಿ ಯೋಜನೆಯಡಿ 1 ಕೋಟಿ 15 ಲಕ್ಷ ಮಾನವ ದಿನಗಳ ಸೃಜನೆಯ ಗುರಿ ನಿಗದಿಪಡಿಸಲಾಗಿದ್ದು, ಜುಲೈ 1 ರಿಂದ ಈವರೆಗೆ ಜಿಲ್ಲೆಯಲ್ಲಿ ಒಟ್ಟು 21,61,161 ಮಾನವ ದಿನಗಳನ್ನು ಸೃಜಿಸಲಾಗಿದೆ. ಈ ಮೂಲಕ ರಾಯಚೂರು ಜಿಲ್ಲೆ ರಾಜ್ಯದಲ್ಲಿ ಪ್ರಥಮ ಸ್ಥಾನದಲ್ಲಿದ್ದು, ಅರಕೇರಾ1,13,525, ದೇವದುರ್ಗ95,749, ಲಿಂಗಸೂಗೂರು4,54,355, ಮಾನ್ವಿ3,74,242, ಮಸ್ಕಿ4,47,490, ರಾಯಚೂರು1,80,485, ಸಿಂಧನೂರು4,20,363, ಸಿರವಾರ74,952 ತಾಲ್ಲೂಕುವಾರು ಮಾನವ ದಿನಗಳನ್ನು ಸೃಜನೆ ಮಾಡಲಾಗಿದೆ.

ವಿಬಿಜಿರಾಮ್ ಜಿ ಯೋಜನೆಯಡಿ ಅರ್ಹ ಗ್ರಾಮೀಣ ಕುಟುಂಬಗಳಿಗೆ ಉದ್ಯೋಗಾವಕಾಶಗಳನ್ನು ತಲುಪಿಸುವ ಉದ್ದೇಶದಿಂದ ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ ಒಂದು ತಿಂಗಳ ಕಾಲ ಜಾಬ್ ಕಾರ್ಡ್ ಮೇಳವನ್ನು ಅಭಿಯಾನದ ರೂಪದಲ್ಲಿ ಹಮ್ಮಿಕೊಳ್ಳುವ ಮೂಲಕ ಜಿಲ್ಲೆಯಲ್ಲಿ 8,636 ಹೊಸ ಜಾಬ್ ಕಾರ್ಡ್ಗಳನ್ನು ವಿತರಿಸಲಾಗಿದೆ.

ವಿಬಿಜಿರಾಮ್ ಜಿ ಯೋಜನೆಯಡಿ ಗ್ರಾಮೀಣ ಜನರಿಗೆ ಸ್ಥಳೀಯವಾಗಿ ಉದ್ಯೋಗಾವಕಾಶಗಳನ್ನು ಕಲ್ಪಿಸುವುದು, ಗ್ರಾಮೀಣ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು, ಜಲಸಂಪನ್ಮೂಲಗಳನ್ನು ಸಂರಕ್ಷಿಸುವುದು ಹಾಗೂ ಗ್ರಾಮೀಣ ಕುಟುಂಬಗಳ ಆರ್ಥಿಕ ಸಬಲೀಕರಣಕ್ಕೆ ನೆರವಾಗುವುದು ಜಿಲ್ಲಾ ಪಂಚಾಯತಿಯ ಪ್ರಮುಖ ಆದ್ಯತೆಯಾಗಿದೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K